ಜನಮನದ ದನಿ


# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ




ಭಾರತ ತಂಡದ ಮಾಜಿ ಆಟಗಾರ ಸಾಯಿರಾಜ್ ಬಹುತುಳೆ ಅವರನ್ನು ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಆಡುವ ಪಂಜಾಬ್ ಕಿಂಗ್ಸ್ ತಂಡಕ್ಕೆ ಸ್ಪಿನ್ ಬೌಲಿಂಗ್ ಕೋಚ್ ಆಗಿ ನೇಮಕ ಮಾಡಲಾಗಿದೆ.


24 ಅಕ್ಟೋಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 223 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ಥಿಯೇಟರ್‌ಗಳನ್ನು ತುಂಬಿಸಿದ ಕಾಂತಾರ ! » 2





ಕನ್ನಡದಲ್ಲಿ ಕಡ್ಡಾಯವಾಗಿ ನಾಮಫಲಕ ಹಾಕದಿದ್ದರೆ ಕ್ರಮ » 3





ವರ್ಷಾಂತ್ಯದೊಳಗೆ ರಷ್ಯಾದಿಂದ ಕಚ್ಚಾ ತೈಲ ಖರೀದಿ ಸ್ಥಗಿತ » 4


# ಹಾಸನಾಂಬ ದೇವಿ ದರ್ಶನಕ್ಕೆ ತೆರೆ

- 26.13 ಲಕ್ಷಕ್ಕೂ ಹೆಚ್ಚು ಭಕ್ತರ ಆಗಮನ
- ಮುಂದಿನ ವರ್ಷ ಅ.29ರಂದು ತೆರೆಯಲಿದೆ ಗರ್ಭಗುಡಿ ಬಾಗಿಲು

• ಪ್ರಜೋದಯ ವರದಿ

**ಹಾಸನ :** ವರ್ಷಕ್ಕೊಮ್ಮೆ ದರ್ಶನ ಕರುಣಿಸುವ ಹಾಸನಾಂಬ ದರ್ಶನೋತ್ಸವಕ್ಕೆ ಗುರುವಾರ ತೆರೆ ಎಳೆಯಲಾಯಿತು. ಈ ಬಾರಿ 26.13 ಲಕ್ಷಕ್ಕೂ ಹೆಚ್ಚು ಭಕ್ತರು ದೇವಿಯ ದರ್ಶನ ಪಡೆದುಕೊಳ್ಳುವ ಮೂಲಕ ದಾಖಲೆ ಬರೆದಿದ್ದಾರೆ.

ಬುಧವಾರ ಮುಂಜಾನೆ ಸಿದ್ದೇಶ್ವರಸ್ವಾಮಿ ಕೊಂಡೋತ್ಸವ, ಹಾಸನಾಂಬೆ ದೇವಿಗೆ ವಿಶೇಷ ಪೂಜೆ, ನೈವೇದ್ಯ ನೆರವೇರಿಸಿದ ಬಳಿಕ ಮಧ್ಯಾಹ್ನ 1.06 ನಿಮಿಷಕ್ಕೆ ಶಾಸ್ತ್ರೋಕ್ತವಾಗಿ ಗರ್ಭಗುಡಿ ಬಾಗಿಲು ಮುಚ್ಚಿ ಬೀಗ ಮುದ್ರೆ ಒತ್ತಲಾಯಿತು. ಮುಂದಿನ ವರ್ಷದ ಹಾಸನಾಂಬ ಉತ್ಸವ ದಿನಾಂಕವನ್ನು ಪಂಚಾಂಗದ ಪ್ರಕಾರ, ನಿಗದಿ ಮಾಡಲಾಗಿದ್ದು, 2026 ಅಕ್ಟೋಬರ್ 29 ರಿಂದ ನವೆಂಬರ್ 11 ರವರೆಗೆ ಹಾಸನಾಂಬ ದೇವಿ ದರ್ಶನ ನೀಡಲಿದ್ದಾಳೆ.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಸಂಸದ ಶ್ರೇಯಸ್ ಪಟೇಲ್, ಶಾಸಕರಾದ ಹೆಚ್.ಪಿ. ಸ್ವರೂಪ್, ಕೆ.ಎಂ.ಶಿವಲಿಂಗೇಗೌಡ, ಸಿಮೆಂಟ್ ಮಂಜು, ಜಿಲ್ಲಾಧಿಕಾರಿ ಲತಾಕುಮಾರಿ, ಡಿಐಜಿ ಡಾ. ಬೋರಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತಾ,




» ನಾಲ್ಕನೇ ಪುಟದಲ್ಲಿ


| ದಿನಾಂಕ - | ದರ್ಶನ ಪಡೆದವರ ಸಂಖ್ಯೆ |
|---|---|
| ಅ.9 | - ಪ್ರಾರಂಭದ ದಿನ |
| ಅ.10 | - 58,002 |
| ಅ.11 | - 2,07,800 |
| ಅ.12 | -1,45,484 |
| ಅ.13 | -2,29,482 |
| ಅ.14 | -2,43,735 |
| ಅ.15 | -2,46,694 |
| ಅ.16 | -2,58,259 |
| ಅ.17 | -3,61,748 |
| ಅ.18 | -2,16,711 |
| ಅ.19 | -1,26,625 |
| ಅ.20 | -2,02,213 |
| ಅ.21 | -2,02,213 |
| ಅ.22 | -1,50,110 |
| ಅ.22 | -1,66,137 |
| ಒಟ್ಟು | -26,13,691 |

### ಇಂದು ಹುಂಡಿ ಎಣಿಕೆ

ಹಾಸನಾಂಬೆ ಮತ್ತು ಸಿದ್ದೇಶ್ವರಸ್ವಾಮಿಯ ದೇಗುಲದ ಹುಂಡಿ ಹಣ ಎಣಿಕೆ ಕಾರ್ಯ ಶುಕ್ರವಾರ ಸಿದ್ದೇಶ್ವರಸ್ವಾಮಿ ದೇವಾಲಯದ ಅವರಣದಲ್ಲಿ ನಡೆಯಲಿದೆ. ಬೆಳಿಗ್ಗೆ 8 ಗಂಟೆಯಿಂದ ಪೊಲೀಸರ ಬಂದೋಬಸ್ತ್ ಮತ್ತು ಸಿಸಿ ಕ್ಯಾಮೆರಾ ಕಣ್ಗಾವಲಿನಲ್ಲಿ ಎಣಿಕೆ ಕಾರ್ಯವು ನಡೆಯಲಿದೆ. ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳು, ಕಂದಾಯ ಇಲಾಖೆ ಸಿಬ್ಬಂದಿ, ಬ್ಯಾಂಕ್ ಸಿಬ್ಬಂದಿ ಭಾಗವಹಿಸಲಿದ್ದಾರೆ.

### 25 ಕೋ.ರೂ. ಆದಾಯ ನಿರೀಕ್ಷೆ

ಈ ಬಾರಿಯ ಹಾಸನಾಂಬ ಆದಾಯ ಮತ್ತು ದರ್ಶನ ಪಡೆದವರ ಸಂಖ್ಯೆಯಲ್ಲಿ ದಾಖಲೆ ಬರೆಯಲಾಗಿದೆ. ವಿಶೇಷ ದರ್ಶನದ 300ರೂ. ಹಾಗು 1000ರೂ. ಟಿಕೆಟ್, ಲಾಡು ಮಾರಾಟದಿಂದ ಒಟ್ಟು 21.82 ಕೋ.ರೂ. ಹಣ ಸಂಗ್ರಹವಾಗಿದೆ. ಹುಂಡಿ ಎಣಿಕೆ ಕಾರ್ಯ ಬಾಕಿ ಇದ್ದು, ಈ ಬಾರಿ ಒಟ್ಟು 25 ಕೋ.ರೂ. ಆದಾಯ ನಿರೀಕ್ಷಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಹೇಳಿದರು.

# ಸತೀಶ್ ಜಾರಕಿಹೊಳಿಯತ್ತ ಸಿದ್ದು ಬಣದ ಚಿತ್ತ

## ಸಿಎಂ ರಾಜಕೀಯ ಸಂಧ್ಯಾಕಾಲದಲ್ಲಿ-ಯತೀಂದ್ರ | ಗೊಂದಲ ಬೇಡವೆಂದರು ಡಿ.ಕೆ.ಶಿ. ಆಪ್ತರು

• ಪ್ರಜೋದಯ ವರದಿ

**ಬೆಂಗಳೂರು :** ನಾಯಕತ್ವ ಬದಲಾವಣೆಯಾಗಲಿದೆ ಎನ್ನುವ ಮಾತುಗಳು ಕೇಳಿ ಬರುತ್ತಿರುವಾಗಲೇ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜಕೀಯ ಸಂಧ್ಯಾಕಾಲದಲ್ಲಿದ್ದಾರೆ, ಸಚಿವ ಸತೀಶ್ ಜಾರಕಿಹೊಳಿ ಆ ಜವಾಬ್ದಾರಿ ಹೊರಲು ಸಮರ್ಥರೆಂದು ಹೇಳಿರುವುದು ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ.

ಸಂಪುಟ ಪುನಾರಚನೆ, ನವೆಂಬರ್ ಕ್ರಾಂತಿ ನಡುವೆಯೇ ಈ ಹೇಳಿಕೆ ಬಂದಿರುವುದು ಕಾಂಗ್ರೆಸ್‌ನಲ್ಲಿ ಸುಂಟರಗಾಳಿ ಎಬ್ಬಿಸಿದೆ. ಮುಖ್ಯಮಂತ್ರಿ ಹುದ್ದೆ ರೇಸ್‌ನಲ್ಲಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಬಲಿಗರು ಖಡಕ್ ತಿರುಗೇಟು ನೀಡಿದ್ದಾರೆ. ಅವರ ಈ ಹೇಳಿಕೆ ಒಂದು ವೇಳೆ ನಾಯಕತ್ವ ಬದಲಾಗುವ ಸನ್ನಿವೇಶ ಬಂದರೆ ಸಿದ್ದರಾಮಯ್ಯ ಬಣ ಸತೀಶ್ ಜಾರಕಿಹೊಳಿಯವರ ಹೆಸರನ್ನು ಮುನ್ನಲೆಗೆ ತರಬಹುದು ಎನ್ನುವ ಚರ್ಚೆಯನ್ನು ಹುಟ್ಟು ಹಾಕಿದೆ.



**ಯತೀಂದ್ರ ಹೇಳಿದ್ದೇನು**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜಕೀಯದ ಸಂಧ್ಯಾಕಾಲದಲ್ಲಿದ್ದಾರೆ. ಇಂತಹ ಸಮಯದಲ್ಲಿ ಪ್ರಗತಿಪರ ಚಿಂತನೆ ಹೊಂದಿರುವವರಿಗೆ, ಸೈದ್ಧಾಂತಿಕವಾಗಿ ಮಾರ್ಗದರ್ಶನ ನೀಡಲು ಮತ್ತು ಮುನ್ನಡೆಸಲು ಒಬ್ಬ ನಾಯಕನ ಅಗತ್ಯವಿದೆ ಎಂದು ಚಿಕ್ಕೋಡಿಯಲ್ಲಿ ನಡೆದ ಸಮಾವೇಶದಲ್ಲಿ ಹೇಳಿದರು.

ಜಾರಕಿಹೊಳಿ ಈ ಜವಾಬ್ದಾರಿ ತೆಗೆದುಕೊಳ್ಳಲು ಸಮರ್ಥರು. ಕಾಂಗ್ರೆಸ್ ಪಕ್ಷದ ಸಿದ್ಧಾಂತದಲ್ಲಿ ನಂಬಿಕೆ ಇರುವ ನಾಯಕರಿಗೆ ಹಾಗು ಯುವಕರಿಗೆ ಅವರು ಮಾದರಿ. ಸಿದ್ಧಾಂತ ಬದ್ಧವಾದ ರಾಜಕಾರಣಿಗಳು ಇರುವುದು ವಿರಳ. ಆದರೆ, ಜಾರಕಿಹೊಳಿಯವರು ಬದ್ಧತೆಯಿಂದ ಕೆಲಸ ಮಾಡುತ್ತಿದ್ದಾರೆ. ಅವರು ಆ ಕೆಲಸವನ್ನು ಮುಂದುವರಿಸಬೇಕೆಂದು ಹೇಳಿದ್ದಾರೆ.

> ಯತೀಂದ್ರ ಸಿದ್ದರಾಮಯ್ಯ ಅವರು ಸೈದ್ಧಾಂತಿಕವಾಗಿ ಸತೀಶ್ ಜಾರಕಿಹೊಳಿ ಹೆಸರು ಹೇಳಿದ್ದಾರೆ. ಅದರಲ್ಲಿ ತಪ್ಪೇನಿದೆ. ಜಾರಕಿಹೊಳಿ ಅವರು ಅಹಿಂದ ಚಳವಳಿಯಲ್ಲಿದ್ದರು. ಅವರಿಗೆ ಆ ಬದ್ಧತೆ ಇದೆ ಎಂದು ಹೇಳಿರಬಹುದು. ಮುಖ್ಯಮಂತ್ರಿ ಹುದ್ದೆ ದೃಷ್ಟಿಯಿಂದ ಆ ರೀತಿ ಮಾತನಾಡಿಲ್ಲ.
> -ಡಾ. ಜಿ. ಪರಮೇಶ್ವರ್, ಗೃಹ ಸಚಿವ

**ಎಳಸುತನದ ಹೇಳಿಕೆ**

ಮುಖ್ಯಮಂತ್ರಿ ಬದಲಾವಣೆ



» ನಾಲ್ಕನೇ ಪುಟದಲ್ಲಿ


# ವ್ಯಾಪಕ ಮಳೆ: ಕೊಳವೆ ಬಾವಿಗಳಲ್ಲಿ ಉಕ್ಕಿ ಹರಿದ ನೀರು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನಾದ್ಯಂತ ಕಳೆದ ಒಂದು ವಾರದಿಂದ ಧಾರಾಕಾರವಾಗಿ ಮಳೆ ಸುರಿಯುತ್ತಿದ್ದು, ಕೆರೆ ಕಟ್ಟೆಗಳು ತುಂಬಿ ಹರಿಯುತ್ತಿರುವುದರ ಜೊತೆಗೆ ಕೊಳವೆ ಬಾವಿಗಳಲ್ಲಿ ಕೇಸಿಂಗ್ ಮೇಲ್ಭಾಗದಿಂದ ನೀರು ಉಕ್ಕಿ ಹರಿಯುತ್ತಿದೆ.

ತಾಲ್ಲೂಕು ವ್ಯಾಪ್ತಿಯಲ್ಲಿ ಪ್ರತಿದಿನ ಬಿಡುವಿಲ್ಲದೆ ಮಳೆ ಸುರಿಯುತ್ತಿದೆ. ಹಳ್ಳ ಕೊಳ್ಳಗಳ ಮೂಲಕ ಮಳೆ ನೀರು ಹರಿಯುತ್ತಿದ್ದು, ಬಹುತೇಕ ಕೆರೆ ಕಟ್ಟೆಗಳು ತುಂಬಿ ಕೋಡಿ ಬಿದ್ದಿವೆ. ತೆಂಗು ಹಾಗು ಕೃಷಿ ಜಮೀನು ಜಲಾವೃತಗೊಂಡಿವೆ. ತಗ್ಗು ಪ್ರದೇಶಗಳಲ್ಲಿ ಜೌಗು ಕಾಣಿಸಿಕೊಂಡಿದೆ. ಬಹುತೇಕ ಕೃಷಿ ಜಮೀನಿಗೆ ತೆರಳುವ ಬಂಡಿ ಅಥವಾ ಕಾಲು ದಾರಿಗಳು ಸಹ ನೀರಿನಿಂದ ಮುಚ್ಚಿ ಹೋಗಿವೆ.



ಹಲವು ವರ್ಷಗಳಿಂದ ತಾಲ್ಲೂಕು ವ್ಯಾಪ್ತಿಯಲ್ಲಿ ವಾಡಿಕೆ ಮಳೆಯಾಗದೆ ಕೆರೆ ಕಟ್ಟೆಗಳು ನೀರಿಲ್ಲದೆ ಬತ್ತಿದ್ದವು. ಗಿಡ ಗಂಟಿಗಳು ಬೆಳೆದು ಕಾಡು ಪ್ರದೇಶದಂತಾಗಿದ್ದು ಚಿರತೆ ಹಾಗು ಕಾಡು ಹಂದಿಗಳು ಸೇರಿ ವನ್ಯ ಪ್ರಾಣಿಗಳ ವಾಸ ತಾಣವಾಗಿದ್ದವು. ಆದರೆ, ಈ ಬಾರಿ ವ್ಯಾಪಕವಾಗಿ ಸುರಿದ ಮಳೆಯಿಂದ ಕೆರೆ ಕಟ್ಟೆಗಳು ತುಂಬಿದ್ದು, ಸಾಕಷ್ಟು ಪ್ರಮಾಣದಲ್ಲಿ ಅಂತರ್ಜಲ ಚೇತರಿಕೆ ಕಂಡಿದೆ ಎಂದು ರೈತ ಸಂಘದ ಅಧ್ಯಕ್ಷ ಅರಳಾಪುರ ಮಂಜೇಗೌಡ ಅವರ ತಿಳಿಸಿದರು.

15-20 ವರ್ಷಗಳಿಂದ ವಾಡಿಕೆಯಂತೆ ಮಳೆಯಾಗದೆ ಚನ್ನರಾಯಪಟ್ಟಣ ತಾಲ್ಲೂಕು ಬರಪೀಡಿತ ಪ್ರದೇಶವಾಗಿತ್ತು. ಹಿರೀಸಾವೆ-ಜುಟ್ಟನಹಳ್ಳಿ, ನವಿಲೆ, ನುಗ್ಗೇಹಳ್ಳಿ, ಬಾಗೂರು ಹಾಗು ಕಲ್ಲೇಸೋಮನಹಳ್ಳಿ ಏತ ನೀರಾವರಿ ಯೋಜನೆಯಡಿ ತಾಲ್ಲೂಕು ವ್ಯಾಪ್ತಿಯ ನೂರಾರು ಕೆರೆಕಟ್ಟೆಗಳು ತುಂಬಿದ್ದು ವ್ಯಾಪ್ತಿಯಲ್ಲಿ ಅಂತರ್ಜಲ ಚೇತರಿಕೆ ಕಂಡಿತ್ತು. ಆದರೆ ತೋಟಿಕೆರೆ, ದಿಡಗ ವ್ಯಾಪ್ತಿ


» ನಾಲ್ಕನೇ ಪುಟದಲ್ಲಿ


# ಜಾತ್ರಾ ಮಹೋತ್ಸವದ ಖರ್ಚು-ವೆಚ್ಚ ಶೀಘ್ರವೇ ಪ್ರಕಟ

## 10 ಕೋ.ರೂ. ವೆಚ್ಚವಾಗಿರುವ ಸಾಧ್ಯತೆ : ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ

• ಪ್ರಜೋದಯ ವರದಿ

**ಹಾಸನ:** ಈ ವರ್ಷ ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ಅಂದಾಜು 10 ಕೋ.ರೂ. ಖರ್ಚಾಗಿರಬಹುದು. ಖರ್ಚು-ವೆಚ್ಚದ ಲೆಕ್ಕಪತ್ರವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದೆಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಹೇಳಿದರು.

ಹಾಸನಾಂಬ ದೇವಾಲಯ ಬಾಗಿಲು ಮುಚ್ಚಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಪ್ರಕಾರ ಭಕ್ತರಿಗೆ ಪ್ರಸಾದ, ಲಾಡು ವಿತರಣೆ ಮಾಡಿದ ಇಸ್ಕಾನ್ ಸಂಸ್ಥೆಗೆ ಅಂದಾಜು 4 ರಿಂದ 5 ಕೋ.ರೂ. ನೀಡಬೇಕಾಗಬಹುದು. ಉಳಿದೆಲ್ಲಾ ಖರ್ಚುಗಳನ್ನು ಸೇರಿಸಿದರೆ 4 ರಿಂದ 5 ಕೋ.ರೂ. ಆಗಬಹುದು.



ಈ ವರ್ಷ ಖರ್ಚು-ವೆಚ್ಚವನ್ನು 15 ರಿಂದ 20 ದಿನಗಳಲ್ಲಿ ಹಾಗು ಕಳೆದ ವರ್ಷದ ಖರ್ಚು-ವೆಚ್ಚವನ್ನು ಶೀಘ್ರದಲ್ಲೇ ಬಿಡಗಡೆ ಮಾಡಲಾಗುವುದೆಂದು ತಿಳಿಸಿದರು.

ಈ ವರ್ಷದ ಹಾಸನಾಂಬ ಜಾತ್ರಾ ಮಹೋತ್ಸವ ವಿದ್ಯುಕ್ತವಾಗಿ ಮುಕ್ತಾಯವಾಗಿದೆ. ಶಾಸ್ತ್ರೋಕ್ತವಾಗಿ ಮುಂದಿನ ವರ್ಷದವರೆಗೂ ಗರ್ಭಗುಡಿ ಬಾಗಿಲು ಬಂದ್ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ಶಾಸಕರು, ಸಂಸದರು, ಜಿಲ್ಲಾಡಳಿತ, ಕಂದಾಯ ಇಲಾಖೆ, ಪೊಲೀಸ್ ಇಲಾಖೆ ಹಾಗು ಎಲ್ಲಾ ಇಲಾಖೆಯವರು ನೂರಕ್ಕೆ ನೂರು ಸಹಕಾರ ಕೊಟ್ಟಿದ್ದಾರೆ. ಅಧಿಕಾರಿಗಳು ಶ್ರಮವಹಿಸಿ ಕೆಲಸ ಮಾಡಿದ್ದಾರೆ. ದೇವಿ ದರ್ಶನಕ್ಕೆ ಬಂದಂತಹ ಸಾರ್ವಜನಿಕರು ಶಾಂತಿಯುತವಾಗಿ ಸಹಕಾರ ಕೊಟ್ಟಿದ್ದಾರೆ ಎಂದರು.

> ಹಾಸನಾಂಬ ದರ್ಶನಕ್ಕೆ ಒಂದು ದಿನಕ್ಕೆ 3 ರಿಂದ 4 ಲಕ್ಷ ಭಕ್ತರು ಆಗಮಿಸಿದರೂ ಬ್ಯಾರಿಕೇಡ್ ವ್ಯವಸ್ಥೆ ಮೂಲಕ ನಿಯಂತ್ರಣ ಮಾಡಬಹುದು. ಆದರೆ, ದೇವಸ್ಥಾನ ಒಳಗೆ ಹೆಚ್ಚು ಭಕ್ತರಿಗೆ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸುವುದೇ ನಮ್ಮ ಮುಂದಿರುವ ಸವಾಲು. ಆ ಸಮಸ್ಯೆ ಸರಿಪಡಿಸದೇ ಬೇರೆ ಏನೇ ಮಾಡಿದರೂ ಪ್ರಯೋಜನವಾಗುವುದಿಲ್ಲ. ಹೆಚ್ಚು ಭಕ್ತರಿಗೆ ಹೇಗೆ ದರ್ಶನ ವ್ಯವಸ್ಥೆ ಕಲ್ಪಿಸಬಹುದೆಂಬ ಬಗ್ಗೆ ಸಭೆ ನಡೆಸಿ, ಇಂಜಿನೀಯರ್ ಸಲಹೆ ಪಡೆದು ಬದಲಾವಣೆ ತರಲು ಪ್ರಯತ್ನಿಸಲಾಗುವುದು.
> -ಕೃಷ್ಣಬೈರೇಗೌಡ, ಜಿಲ್ಲಾ ಉಸ್ತುವಾರಿ ಸಚಿವ

ಎಸ್‌ಸಿಸಿ, ಸ್ಕೌಟ್ಸ್ ಅಂಡ್ ಗೈಡ್ಸ್, ಪೌರಕಾರ್ಮಿಕರು ಶ್ರಮಿಸಿದ್ದಾರೆ. ಜನಸಾಮಾನ್ಯರಿಗೆ ಯಾವುದೇ ನೂಕು ನುಗ್ಗಲು ಇಲ್ಲದೆ ಸರಳವಾಗಿ ದರ್ಶನವಾಗಿದೆ. ಈ ಬಾರಿ ಹಾಸನಾಂಬ ದೇವಿ ದರ್ಶನ ಎಲ್ಲರಿಗೂ ಅತೀವ ಸಂತೋಷ ತಂದು ಕೊಟ್ಟಿದೆ. ಈ ಬಾರಿಯ ಉತ್ಸವದ ವೇಳೆ ಒಂದು ವಾರಗಳ ಕಾಲ ಪ್ರತಿನಿತ್ಯ ಧಾರಾ ಕಾರ ಮಳೆ ಯನ್ನು ಲೆಕ್ಕಿಸದೆ ದೇವಿ ದರ್ಶನ ಪಡೆದಿದ್ದಾರೆ. ಆಗಮಿಸಿದ ಎಲ್ಲಾ ಭಕ್ತರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.


» ನಾಲ್ಕನೇ ಪುಟದಲ್ಲಿ


# ಭತ್ತದ ಗದ್ದೆಯಲ್ಲಿ ಕಾಡಾನೆಗಳ ದಾಂಧಲೆ

• ಪ್ರಜೋದಯ ವರದಿ

**ಹಾಸನ :** ಭಾರೀ ಮಳೆಯಿಂದ ಅಪಾರ ಪ್ರಮಾಣದ ಬೆಳೆ ಹಾನಿಯಾಗುತ್ತಿದ್ದರೆ, ಮತ್ತೊಂದೆಡೆ ಕಷ್ಟಪಟ್ಟು ಬೆಳೆದ ಫಸಲು ಕಾಡಾನೆಗಳ ಪಾಲಾಗುತ್ತಿದೆ.

ಸಕಲೇಶಪುರ ತಾಲ್ಲೂಕಿನ ಮರ್ಜನಹಳ್ಳಿ ಗ್ರಾಮದಲ್ಲಿ ಕಾಡಾನೆಗಳ ಹಿಂಡು ದಾಳಿ ನಡೆಸಿ ಭತ್ತದ ಗದ್ದೆಗಳನ್ನು ತುಳಿದು, ತಿಂದು ಹಾನಿಯುಂಟು ಮಾಡಿವೆ. ರಾಮಚಂದ್ರ ಮತ್ತಿತರರ ಭತ್ತದ ಗದ್ದೆಗೆ ಲಗ್ಗೆ ಇಟ್ಟಿರುವ ಕಾಡಾನೆಗಳು ಭತ್ತದ ಬೆಳೆ ಫಸಲಿಗೆ ಬರುವ ಮುನ್ನವೇ ನಾಶಪಡಿಸಿವೆ.

ಸಕಲೇಶಪುರ ತಾಲ್ಲೂಕಿನ ಕಾಮೇನಹಳ್ಳಿ ಗ್ರಾಮ ವ್ಯಾಪ್ತಿಯ ಚೆಟ್ಟಿಯರ್ ಕಾಡು, ಸುಂಡಳ್ಳಿ ಟಾಟಾ ಎಸ್ಟೇಟ್ ಸುತ್ತಮುತ್ತ ಕಾಡಾನೆಗಳು ಕಾಣಿಸಿಕೊಂಡಿರುವುದರಿಂದ ಕಾರ್ಮಿಕರಿಗೆ ಕೆಲಸ ಇಲ್ಲದಂತಾಗಿದೆ. ಕಾಡಾನೆಗಳಿಂದ ಈ ಭಾಗದ ನಲ್ಲುಲ್ಲಿ ಸೇರಿ ಸುತ್ತಮುತ್ತಲಿನ ಗ್ರಾಮಗಳ ಜನರು ಆತಂಕದಿಂದ ಓಡಾಡುವಂತಾಗಿದೆ.

ಹೆತ್ತೂರು ಮತ್ತು ಯಸಳೂರು ಹೋಬಳಿಯ ಮರ್ಕಳ್ಳಿ ಗ್ರಾಮದ ಕಲ್ಲುತೋಟ, ಕುಂಬ್ರಿನಿಯರ್ ಬಸರಿಹಡ್ಲು, ಬಾಳೆಕೆರೆ ಗ್ರಾಮದ ನೀಲಗಿರಿ ನಡುತೋಪು, ಕೊಂತನಮನೆ ಗ್ರಾಮದ ಮಣ್ಣುಗದ್ದೆ, ಕಡ್ರಳ್ಳಿ ಬೆಟ್ಟ, ಹುದಿನೂರು ಗ್ರಾಮದ ಸ್ವಾಮಿ ಬೆಟ್ಟ, ಮೆಕ್ಕಿರಮನೆ ಗ್ರಾಮದ ಹೆಗ್ಗೋಡ್ಲು, ಹಾಡ್ಯ ಗ್ರಾಮದ ದಿಣ್ಣೆಕೆರೆ ಹಡ್ಲು ಸುತ್ತಮುತ್ತ ಕಾಡಾನೆಗಳು ಕಾಣಿಸಿಕೊಂಡು ಸ್ಥಳೀಯರಲ್ಲಿ ಭಯ ಮೂಡಿಸಿವೆ. ಜೊತೆಗೆ ಕಾಫಿ ತೋಟಗಳಲ್ಲಿ ಅಡ್ಡಾದಿಡ್ಡಿ ಓಡಾಡಿ ಹಾನಿಯುಂಟು ಮಾಡಿವೆ.



ಆಲೂರು ತಾಲ್ಲೂಕಿನ ಬಲ್ಲೂರು ಬೆಟ್ಟಹಳ್ಳಿ ಫಾರೆಸ್ಟ್, ದೊಡ್ಡಬೆಟ್ಟ ಮೀಸಲು ಅರಣ್ಯ ಸುತ್ತಮುತ್ತ ಕಾಡಾನೆಗಳು ಕಣಿಸಿಕೊಂಡಿವೆ. ಇನ್ನು ಬೇಲೂರು ತಾಲ್ಲೂಕಿನ ಜಗಬೋರನಹಳ್ಳಿ ಫಾರೆಸ್ಟ್ ಜಗಬೋರನಹಳ್ಳಿ, ಬಿಕ್ಕೋಡು ಎಸ್ಟೇಟ್ ಬಿಕ್ಕೋಡು ಸುತ್ತಮುತ್ತ ಗಜಪಡೆ ಸಂಚಾರ ಇರುವುದರಿಂದ ರಾತ್ರಿ ಹೊತ್ತಿನಲ್ಲಿ ಜನರು ಓಡಾದಂತೆ ಮತ್ತು ಜನರು ಹಾಗು ಕೂಲಿ ಕಾರ್ಮಿಕರು ಎಚ್ಚರ ವಹಿಸುವಂತೆ ಆನೆ ಕಾರ್ಯಪಡೆ ಕಂಟ್ರೋಲ್ ರೂಮ್‌ನಿಂದ ಎಚ್ಚರಿಕೆ ನೀಡಲಾಗಿದೆ.

## ಹೊಸಲೈನ್ ರಸ್ತೆಯಲ್ಲಿ ಕುಸಿದ ಮನೆ

**ಹಾಸನ:** ಕಳೆದ ನಾಲ್ಕು ದಿನಗಳಿಂದ ಸುರಿದ ಭಾರೀ ಮಳೆಗೆ ಶೀತಗೊಂಡಿದ್ದ ಮನೆಯೊಂದು ಗುರುವಾರ ಕುಸಿದಿರುವ ಘಟನೆ ಹೊಸಲೈನ್ ರಸ್ತೆಯಲ್ಲಿ ನಡೆದಿದೆ.

ಅಸ್ಲಂ ಶೇರ್‌ಖಾನ್ ಎಂಬುವವರಿಗೆ ಸೇರಿದ ವಾಸದ ಮನೆಯ ಹಾಲ್ ಒಂದು ಕೋಣೆ ಸಂಪೂರ್ಣ ಧರಾಶಾಹಿಯಾಗಿದೆ. ಅಡುಗೆ ಮನೆಯಲ್ಲಿ ಮಹಿಳೆ ಒಬ್ಬರೇ ಇದ್ದರು. ಗೋಡೆ ಕುಸಿಯುತ್ತಿದ್ದಂತೆ ಎಚ್ಚೆತ್ತು ಹೊರಗೆ ಓಡಿಬಂದು ಪ್ರಾಣಾ ಪಾಯದಿಂದ ಪಾರಾಗಿದ್ದಾರೆ. ಮನೆಯಲ್ಲಿದ್ದ ಪಾತ್ರೆ, ಬಟ್ಟೆ, ದವಸ ಧಾನ್ಯಗಳು ನೆಲಸಮವಾಗಿವೆ. ಅಧಿಕಾರಿಗಳು ತಮಗೆ ಪರಿಹಾರ ಕಲ್ಪಿಸಬೇಕೆಂದು ಅಸ್ಲಂ ಶೇರ್‌ಖಾನ್ ಆಗ್ರಹಿಸಿದ್ದಾರೆ.

# ನಾಳೆಯಿಂದ ಕೆಂಚಾಂಬಾ ದೇವಿ ಚಿಕ್ಕಜಾತ್ರೆ

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕಿನ ಹರಿಹಳ್ಳಿ ಗ್ರಾಮದಲ್ಲಿರುವ ಹಾಸನಾಂಬ ದೇವಿಯ ಸಹೋದರಿ ಕೆಂಚಾಂಬಾ ದೇವಿಯ ಚಿಕ್ಕ ಜಾತ್ರೆ ಅ.25 ಮತ್ತು 26 ರಂದು ನಡೆಯಲಿದೆ ಎಂದು ದೇವಸ್ಥಾನ ಆಡಳಿತ ಮಂಡಳಿ ಅಧ್ಯಕ್ಷ ಹೆಚ್.ಡಿ ಗೋಪಾಲ್ ಅವರು ತಿಳಿಸಿದ್ದಾರೆ.

ತಾಲ್ಲೂಕಿನ ಕೆಂಚಮ್ಮನ ಹೊಸಕೋಟೆ ಹೋಬಳಿಯ ಹರಿಹಳ್ಳಿ ಗ್ರಾಮದಲ್ಲಿ ನೆಲೆಸಿರುವ ಪುರಾಣ ಪ್ರಸಿದ್ಧ ಶ್ರೀ ಕೆಂಚಾಂಬಾ ದೇವಿಯ ಜಾತ್ರೆಯನ್ನು ಸುತ್ತಮುತ್ತಲಿನ 48 ಹಳ್ಳಿಗಳ ಜನರು ಸೇರಿ ಆಚರಿಸಲಾಗುತ್ತದೆ. ಅ.25ರಂದು ರಾತ್ರಿ 8:30ಕ್ಕೆ ಮೂಲ ದೇವಸ್ಥಾನದಲ್ಲಿ ಸಪ್ತಮಾತೃಕಾಲಂಕಾರ, ಅಭಿಷೇಕ, ವಿಶೇಷ ಪೂಜೆ, ಮಹಾ ಮಂಗಳಾರತಿ, ಸುಗ್ಗಿ, ಉಧ್ವಾರ್ಚನೆ ನಡೆಯಲಿದೆ ಎಂದು ಹೇಳಿದರು.

ಅ.26ರಂದು ಮೂಲ ದೇವ ಸ್ಥಾನದಿಂದ ದೇವಿಗೆ ಸಕಲ ಗೌರವಗಳೊಂದಿಗೆ ಮೆರವಣಿಗೆಯಲ್ಲಿ ದೇವಸ್ಥಾನದತ್ತ ಪ್ರಯಾಣ ಬೆಳೆಸಲಾಗುವುದು. ಮಧ್ಯಾಹ್ನ 1.30ಕ್ಕೆ ಮಹಾಮಂಗಳಾರತಿ, 2.30ಕ್ಕೆ ಕೆಂಡ ಹಾಯುವ ಕಾರ್ಯಕ್ರಮ ನಡೆಯುತ್ತದೆ. ನಂತರ ಬನ್ನಿ ಮಂಟಪಕ್ಕೆ ತೆರಳಿ, ವೀರಭದ್ರದೇವರೊಂದಿಗೆ ಪುನಃ ಕೆಂಡ ಹಾಯ್ದು ಗರ್ಭಗುಡಿಯಲ್ಲಿ ದರ್ಶನ ಪ್ರಾರಂಭವಾಗಿ ಭಕ್ತರಿಗೆ ದೇವಿಯ ಪಾದಮುಟ್ಟಿ ನಮಸ್ಕರಿಸಲು ರಾತ್ರಿ ವರೆಗೂ ಅವಕಾಶ ಕಲ್ಪಿಸಿಕೊಡಲಾಗಿದೆ ಎಂದು ತಿಳಿಸಿದರು.



ಜಾತ್ರೆಗೆ ಆಗಮಿಸುವ ಭಕ್ತ ಅನುಕೂಲಕ್ಕಾಗಿ ಹಾಸನ, ಸಕಲೇಶಪುರ, ಬಾಳ್ಳುಪೇಟೆ, ಕೊಡ್ಲಿ ಪೇಟೆಯಿಂದ ಕೆಎಸ್‌ಆರ್‌ಟಿಸಿ ಬಸ್ ವ್ಯವಸ್ಥೆ ಮಾಡಲಾಗಿದೆ. ದಾಸೋಹ, ಕುಡಿ ಯುವ ನೀರು, ಶೌಚಾಲಯ ವ್ಯವಸ್ಥೆ ಸಮರ್ಪಕವಾಗಿ ಮಾಡಲಾಗಿದೆ. ಪೊಲೀಸ್ ಬಂದೋಬಸ್ತ್, ಆರೋಗ್ಯ ಇಲಾಖೆಯಿಂದ ಸ್ಥಳದಲ್ಲೇ ಪ್ರಥಮ ಚಿಕಿತ್ಸೆಯ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

## ಸರಣಿ ಕಳ್ಳತನ: ಹೆಚ್ಚಿದ ಪೊಲೀಸ್ ಗಸ್ತು

ಅರೇಹಳ್ಳಿ: ಇತ್ತೀಚೆಗೆ ಅರೇಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮನೆ, ಅಂಗಡಿ ಹಾಗು ಕಾಫಿ ತೋಟಗಳಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾದ ಹಿನ್ನಲೆ ಎಚ್ಚೆತ್ತುಕೊಂಡ ಪೊಲೀಸರು, ರಾತ್ರಿ ವೇಳೆ ಗಸ್ತುತಿರುವುದು, ಅನುಮಾನಾಸ್ಪದ ವ್ಯಕ್ತಿಗಳ ತಪಾಸಣೆಯನ್ನು ತೀವ್ರಗೊಳಿಸಿದ್ದಾರೆ.

ಬೆಳಗಿನ ಸಮಯಲ್ಲೇ ಮನೆಗಳಲ್ಲಿ ಸರಣಿ ಕಳ್ಳತನ, ರಾತ್ರಿ ವೇಳೆ ಒಂಟಿ ಮನೆಯಲ್ಲಿ ದರೋಡೆ, ಕೆಲ ದಿನಗಳ ಹಿಂದೆಯಷ್ಟೇ ಲಿಂಗಾಪುರ ಗ್ರಾಮದ ಅಂಗನವಾಡಿ ಕೇಂದ್ರಕ್ಕೂ ಕನ್ನ ಹಾಕಿ ಸಾವಿರಾರು ಮೌಲ್ಯದ ವಸ್ತುಗಳನ್ನು ದೋಚಲಾಗಿತ್ತು. ಈ ಎಲ್ಲಾ ಘಟನೆಗಳಿಂದ ಎಚ್ಚೆತ್ತುಕೊಂಡ ಪೊಲೀಸರು ಇದೀಗ ರಾತ್ರಿ ಸಮಯದಲ್ಲಿ ಅನುಮಾನಾಸ್ಪದವಾಗಿ ತಿರುಗಾಡುತ್ತಿರುವವರ ಬಗ್ಗೆ ನಿಗಾ ವಹಿಸಿ, ತಪಾಸಣೆ ನಡೆಸುತ್ತಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾದ ಹಿನ್ನಲೆ ಸ್ಥಳೀಯರಲ್ಲಿ ಆತಂಕ ಸೃಷ್ಟಿಯಾಗಿದೆ. ರಾತ್ರಿ ಸಮಯದಲ್ಲಿ ಮನೆ ಬಿಟ್ಟು ಹೊರಬರಲು ಭಯಪಡುವ ಸ್ಥಿತಿ ನಿರ್ಮಾಣವಾಗಿದೆ. ಈ ಬಗ್ಗೆ ಜನರು ಆತಂಕ ವ್ಯಕ್ತಪಡಿಸಿದ್ದರಿಂದ ಅರೇಹಳ್ಳಿ ಠಾಣೆ ವ್ಯಾಪ್ತಿಯಲ್ಲಿ ಗಸ್ತು ಹೆಚ್ಚಿಸಿ ಅನುಮಾನಾಸ್ಪದ ವ್ಯಕ್ತಿಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ.

## ವರುಣಾರ್ಭಟಕ್ಕೆ ಕೊಚ್ಚಿ ಹೋದ ರಸ್ತೆ | ಹಿಂಗಾರು ಮಳೆಗೆ ಕಂಗಾಲಾದ ರೈತರು

# ಮುಂದುವರಿದ ಮಳೆಯ ಅಬ್ಬರ-ಅಪಾರ ನಷ್ಟ

• ಪ್ರಜೋದಯ ವರದಿ

**ಹಾಸನ:** ನಗರ ಸೇರಿ ಜಿಲ್ಲಾದ್ಯಂತ ಬುಧವಾರ ರಾತ್ರಿ ಸುರಿದ ಧಾರಾಕಾರ ಮಳೆಗೆ ಜನಜೀವನ ಜೀವನ ಸಂಪೂರ್ಣ ಅಸ್ತವ್ಯಸ್ತವಾಗಿರುವುದು ಮಾತ್ರವಲ್ಲದೆ ಅಪಾರ ಪ್ರಮಾಣದ ಹಾನಿಯೂ ಆಗಿದೆ.

ಬುಧವಾರ ಸಂಜೆ 7 ರಿಂದ ಮಧ್ಯರಾತ್ರಿ 1 ಗಂಟೆಯವರೆಗೆ ಎಡೆಬಿಡದೆ ಮಳೆ ಸುರಿಯಿತು. ದೀಪಾವಳಿ ಹಬ್ಬದ ಹಿನ್ನಲೆ ಪಟಾಕಿ ಹಾರಿಸಲು ಸಿದ್ಧತೆ ಮಾಡಿಕೊಂಡವರ ಯೋಜನೆಗೆ ವರುಣ ತಣ್ಣೀರೆರಚಿದ್ದು ಮಾತ್ರವಲ್ಲದೆ ಗ್ರಾಮೀಣ ಭಾಗದಲ್ಲಿ ಹಳ್ಳಕೊಳ್ಳಗಳು ಭರ್ತಿಯಾಗಿ ಕರೆ ಕೋಡಿ ಒಡೆದು ಅಪಾರ ನಷ್ಟ ಸಂಭವಿಸಿದೆ. ಮಳೆಯ ಹೊಡೆತಕ್ಕೆ ಹಾಸನ-ಮರ್ಕುಲಿ ಮಾರ್ಗದ ಕೌಶಿಕ ಕೆರೆ ಕೋಡಿ ಒಡೆದು ರಸ್ತೆ ಸಂಪೂರ್ಣ ಕೊಚ್ಚಿ ಹೋಗಿದೆ. ಸಾವಂತನಹಳ್ಳಿಯ ಶ್ರೀರಾಮದೇವರ ಕಟ್ಟೆ ಒಡೆದು ಹೊಲಗಳಿಗೆ ನೀರು ನುಗ್ಗಿರುವುದರಿಂದ ಬೆಳೆ ನಷ್ಟವುಂಟಾಗಿದೆ. ಹಿಂಗಾರು ಮಳೆಯಿಂದ ರಾಗಿ ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮರ್ಕನಹಳ್ಳಿ, ಗುಡುಗನಹಳ್ಳಿ, ಸಾವಂತನಹಳ್ಳಿ, ಚಿಗಳ್ಳಿ ವ್ಯಾಪ್ತಿಯಲ್ಲಿ ಕೆರೆಕಟ್ಟೆಗಳು ಭರ್ತಿಯಾಗಿ ಹಲವು ಸಂಪರ್ಕ ರಸ್ತೆಗಳು ಜಲಾವೃತವಾಗಿವೆ. ಅಲ್ಲಲ್ಲಿ ವಿದ್ಯುತ್ ಕಂಬಗಳು ಬಿದ್ದಿರುವುದರಿಂದ ರಾತ್ರಿ ಪೂರ್ತಿ ಕತ್ತಲಲ್ಲೇ ಕಳೆಯುವಂತಾಯಿತು. ವಿಷಯ ತಿಳಿದು ಸಂಸದ ಶ್ರೇಯಸ್ ಪಟೇಲ್ ಅವರು ಕೌಶಿಕ ಕೆರೆಗೆ ಭೇಟಿ ನೀಡಿ ಪರಿಶೀಲಿಸಿದರು. ಸಾರ್ವಜನಿಕ ಸಂಚಾರಕ್ಕೆ ತೊಂದರೆ ಯಾಗದಂತೆ ಶೀಘ್ರ ಕ್ರಮ ಕೈಗೊಳ್ಳ ಬೇಕೆಂದು ಅಧಿಕಾರಿಗಳಿಗೆ ಸೂಚಿಸಿ ದರು.

**ಮನೆಗಳಿಗೆ ನುಗ್ಗಿದ ನೀರು**

ಹಾಸನದ ಒಂಬತ್ತನೇ ವಾರ್ಡ್‌ನ ರವೀಂದ್ರ ನಗರದಲ್ಲಿ ಮಳೆ ನೀರು ಮನೆಗೆ ನುಗ್ಗಿ ರಾತ್ರಿಯಿಡಿ ನೀರು ಹೊರ ಹಾಕಲು ಹರಸಾಹಸ ಪಡುವಂತಾಯಿತು. ಇಳಿಜಾರು ಪ್ರದೇಶವಾದ ರಂಗೋಲಿ ಹಳ್ಳದ ಬಹುತೇಕ ಮನೆಗಳಿಗೆ ನೀರು ನುಗ್ಗಿ ಜನರು ತೊಂದರೆ ಅನುಭವಿಸಿದರು. ಅರಕಲಗೂಡು ತಾಲ್ಲೂಕು ಕೊಣನೂರು ಹೋಬಳಿ ವ್ಯಾಪ್ತಿಯಲ್ಲಿ ನೀರು ಮನೆಯೊಳಗೆ ನುಗ್ಗಿ ಪರದಾಡುವಂತಾಯಿತು. ಸಂಜೆ 5 ಗಂಟೆಗೆ ಶುರುವಾದ ಮಳೆ ರಾತ್ರಿ 10.30ರ ವರೆಗೆ ಬಿಡುವು ನೀಡದೆ ಸುರಿಯಿತು. ದೀಪಾವಳಿ ಹಬ್ಬದ ಪ್ರಯುಕ್ತ ಸಾಮಾಗ್ರಿ ಖರೀದಿಗೆ ಹಳ್ಳಿಗಳಿಂದ ಬಂದವರು ವಾಪಾಸ್ ಹೋಗಲು ಸಾಧ್ಯವಾಗದಂತಾ ಯಿತು. ಪಟ್ಟಣದ ಕೆಲವು ಅಂಗಡಿಗಳಿಗೆ ನೀರು ನುಗ್ಗಿ ವ್ಯಾಪಾರಕ್ಕೆ ಅಡಚಣೆ ಯುಂಟು ಮಾಡಿತು. ಪಟ್ಟಣದ ಬಾರ್‌ಗೆ ನೀರು ನುಗ್ಗಿದ್ದ ರಿಂದ ಮದ್ಯ ಪ್ರಿಯರು ತಡರಾತ್ರಿವರೆಗೆ ಅಲ್ಲೇ ಕೂರುವಂತಾಯಿತು. ಲಕ್ಕನಹಳ್ಳಿ ಗ್ರಾಮದ ರಾಘವೇಂದ್ರ ಅವರಿಗೆ ಸೇರಿದ ಎರಡು ಎಕರೆ ಅಡಿಕೆ ತೋಟ ಸಂಪೂರ್ಣ ನೀರಿನಿಂದ ಜಲಾವೃತವಾಗಿದೆ. ಲಕ್ಷಾಂತರ ರೂಪಾಯಿ ಮೌಲ್ಯದ ಬೆಳೆ ನೀರಿನಲ್ಲಿ ಕೊಚ್ಚಿ ಹೋಗುವ ಆತಂಕ ಅವರನ್ನು ಕಾಡುತ್ತಿದೆ.



### ಹೇಮಾವತಿ ಅಚ್ಚುಕಟ್ಟು ಪ್ರದೇಶದಲ್ಲಿ ಎಚ್ಚರಿಕೆ

ಹೇಮಾವತಿ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆ ಸುರಿಯುತ್ತಿದ್ದು ವರುಣನ ಆರ್ಭಟ ಮುಂದುವರಿಯುವ ಸಾಧ್ಯತೆ ಇದೆ. 2922 ಅಡಿ ಸಾಮರ್ಥ್ಯದ ಹೇಮಾವತಿ ಜಲಾಶಯದಲ್ಲಿ ಪ್ರಸ್ತುತ 2921.50 ಅಡಿ ನೀರಿದೆ. 37.103 ಟಿಎಂಸಿ ಸಂಗ್ರಹ ಸಾಮರ್ಥ್ಯದ ಅಣೆಕಟ್ಟೆ ಇದಾಗಿದ್ದು, ಈಗ 36.620 ಟಿಎಂಸಿ ನೀರು ಸಂಗ್ರಹವಾಗಿದೆ. 16394 ಕ್ಯೂಸೆಕ್ ಒಳ ಹರಿವಿದ್ದು, 4600 ಹೊರ ಹರಿವು ಇದೆ. ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದುಬರುವ ಸಾಧ್ಯತೆ ಇರುವುದರಿಂದ ಯಾವ ಸಮಯ ದಲ್ಲಾದರೂ ನದಿಗೆ ನೀರು ಬಿಡಬಹುದು. ಹೇಮಾವತಿ ನದಿ ಪಾತ್ರ, ನದಿ ದಂಡೆ ಮತ್ತು ಅಕ್ಕಪಕ್ಕದಲ್ಲಿ ವಾಸಿಸುವ ಗ್ರಾಮಸ್ಥರು ಸುರಕ್ಷಿತ ಸ್ಥಳಗಳಿಗೆ ತೆರಳಬೇಕೆಂದು ಹೇಮಾವತಿ ಯೋಜನಾ ವೃತ್ತ ಸೂಪರಿಂಟೆಂಡಿಂಗ್ ಇಂಜಿನಿಯರ್ ಜೆ.ಕೆ. ಜ್ಯೋತಿ ಅವರು ಕೋರಿದ್ದಾರೆ.

ಗುರುವಾರ ಬೆಳಿಗ್ಗೆ 8.30ಕ್ಕೆ ಕೊನೆ ಗೊಂಡಂತೆ ಕಳೆದ 24 ಗಂಟೆಯಲ್ಲಿ ಜಿಲ್ಲೆಯ ಎಲ್ಲಾ ಹೋಬಳಿಗಳಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗಿದೆ. ಹೆತ್ತೂರು 78.6 ಮಿ.ಮೀ, ಹಾನುಬಾಳು 72.9 ಮಿ.ಮೀ. ಮತ್ತು ಯಸಳೂರು, ಕೊಣನೂರಿನಲ್ಲಿ ತಲಾ 70.7 ಮಿ.ಮೀ. ಮಳೆಯಾದ ವರದಿಯಾಗಿದೆ.



**ಏಕಾಏಕಿ ಕುಸಿದ ಮನೆ**

ಹೊಳೆನರಸೀಪುರ ತಾಲ್ಲೂಕು ಹಳ್ಳಿ ಮೈಸೂರು ಹೋಬಳಿ ನೇರಳೆ ಗ್ರಾಮದಲ್ಲಿ ಶಿವಶಂಕರ್ ಎಂಬುವವರಿಗೆ ಸೇರಿದ ವಾಸದ ಮನೆ ಮಳೆಯಿಂದ ಕುಸಿದಿದೆ. ಬುಧವಾರ ರಾತ್ರಿ ಕುಟುಂಬ ಸದಸ್ಯರೆಲ್ಲರೂ ಕೊಠಡಿಯಲ್ಲಿ ಮಲಗಿದ್ದರು. ಗೋಡೆ ಕುಸಿಯುವ ಶಬ್ದ ಕೇಳುತ್ತಿದ್ದಂತೆ ತಕ್ಷಣ ಹೊರಗೆ ಓಡಿ ಬಂದಿದ್ದಾರೆ. ಮನೆಯಲ್ಲಿದ್ದ ವಸ್ತುಗಳು,

## ಅ.28 ರಂದು ಸುವರ್ಣ ಮಹೋತ್ಸವ

• ಪ್ರಜೋದಯ ವರದಿ

**ಹಾಸನ :** ನಗರದ ಸರ್ಕಾರಿ ಇಂಜಿನೀಯರಿಂಗ್ ಕಾಲೇಜು ಮೈದಾನದಲ್ಲಿ ಅ.28 ರಂದು ಮಧ್ಯಾಹ್ನ 2 ಗಂಟೆಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನಲೆಯಲ್ಲಿ ಸುವರ್ಣ ಮಹೋತ್ಸವವನ್ನು ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಇಂಧನ ಸಚಿವರೂ ಆದ ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ ಜಾರ್ಜ್ ಅವರು ಗೌರವ ಉಪಸ್ಥಿತಿ ವಹಿಸಲಿದ್ದಾರೆ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ.

ಕನಾಟಕ ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ.ಪ್ರಾಣೇಶ್, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ, ಶೃಂಗೇರಿ ಶಾಸಕ ಬಿ.ಡಿ.ರಾಜೇಗೌಡ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್ ಅವರು ಗೌರವ ಉಪಸ್ಥಿತಿ ವಹಿಸಲಿದ್ದಾರೆ. ಶಾಸಕ ಹೆಚ್.ಪಿ.ಸ್ವರೂಪ್ ಅಧ್ಯಕ್ಷತೆ ವಹಿಸುವರು.

## ವ್ಯಾಪಕ ಮಳೆ: ಕೊಳವೆ ಬಾವಿಗಳಲ್ಲಿ ಉಕ್ಕಿ ಹರಿದ ನೀರು

» ಮೊದಲನೇ ಪುಟದಿಂದ

ಸೇರಿ ಏತ ನೀರಾವರಿ ಯೋಜನೆಯ ವ್ಯವಸ್ಥೆ ಇಲ್ಲದ ನೂರಾರು ಕೆರೆಗಳು ನೀರಿಲ್ಲದೆ ಬರಡಾಗಿದ್ದವು. ಜನ ಜಾನುವಾರುಗಳು ನೀರಿಗಾಗಿ ಪರಿತಪಿಸಬೇಕಾಗಿತ್ತು. ಅಂತರ್ಜಲ ಇಳಿ ಮುಖಗೊಂಡು ಕೊಳವೆ ಬಾವಿಗಳು ಬತ್ತಿ ಬರಿದಾಗಿದ್ದವು.

ಈ ಬಾರಿಯೂ ಪೂರ್ವ ಮುಂಗಾರಿನಿಂದಲೂ ವಾಡಿಕೆಯಂತೆ ಮಳೆಯಾಗಿರಲಿಲ್ಲ. ಕಳೆದ ವಾರದಿಂದ ಧಾರಾಕಾರವಾಗಿ ಮಳೆ ಸುರಿ ಯುತ್ತಿದ್ದು, ಬತ್ತಿ ಬರಿದಾಗಿದ್ದ ಕೆರೆಗಳು ಸಹ ನೀರು ಕಂಡಿವೆ. ಬಹುತೇಕ ಕೆರೆಕಟ್ಟೆಗಳು ತುಂಬಿ ಕೋಡಿ ಬೀಳುವ ಹಂತದಲ್ಲಿವೆ. ಇದೇ ರೀತಿ ಕಳೆದ ನಾಲ್ಕು ವರ್ಷಗಳ ಹಿಂದೆ ವ್ಯಾಪ್ತಿಯಲ್ಲಿ ಧಾರಾಕಾರ ಮಳೆಯಾಗಿ ಬಾಳಗಂಚಿ, ದಿಡಗ ಸೇರಿ ಬಹುತೇಕ ಕೆರೆಕಟ್ಟೆಗಳು ಎರಡು ಮೂರು ಬಾರಿ ಕೋಡಿ ಬಿದ್ದಿದ್ದವು. ನಂತರದ ವರ್ಷಗಳಲ್ಲಿ ವಾಡಿಕೆಯಂತೆ ಮಳೆಯಾಗದ ಕಾರಣ ಮತ್ತೆ ಬರ ಮುಂದುವರಿದಿತ್ತು. ಈ ವರ್ಷ ಮಳೆರಾಯ ಕಣ್ತೆರೆದಿದ್ದು ತಂಪೆರೆಯುತ್ತಿದ್ದಾನೆ.

ತಗ್ಗು ಪ್ರದೇಶಗಳಲ್ಲಿ ಜೌಗು ಹರಿಯುತ್ತಿದ್ದು ತಾಲ್ಲೂಕಿನ ಎಂ.ಕೆ.ಹೊಸೂರು, ಚಿಕ್ಕೇನಹಳ್ಳಿ, ಅಣತಿ ಸೇರಿ ವಿವಿಧ ಗ್ರಾಮಗಳಲ್ಲಿ ಹಲವು ವರ್ಷಗಳಿಂದ ಬತ್ತಿ ಬರಿದಾಗಿದ್ದ ಕೊಳವೆ ಬಾವಿಗಳಲ್ಲಿ ಕೇಸಿಂಗ್ ಪೈಪ್ ಮೇಲಿನಿಂದ ನೀರು ಉಕ್ಕಿ ಹರಿಯುತ್ತಿರುವುದು ರೈತರಲ್ಲಿ ಆಶ್ಚರ್ಯದ ಜೊತೆಗೆ ಸಂತಸ ಮೂಡಿಸಿದೆ. ಚಿಕ್ಕೇನಹಳ್ಳಿ ಗ್ರಾಮದ ಕೊಳವೆ ಬಾವಿಯೊಂದರಲ್ಲಿ ನೀರು ಚಿಮ್ಮುತ್ತಿದೆ.

ಹವಾಮಾನ ಇಲಾಖೆ ನೀಡಿರುವ ಮುನ್ಸೂಚನೆ ಪ್ರಕಾರ ಇನ್ನೂ 6 ರಿಂದ 7 ದಿನಗಳು ಮಳೆಯಾಗುವ ಸಾಧ್ಯತೆ ಇದ್ದು, ಕೆರೆಕಟ್ಟೆಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಬರುವ ನಿರೀಕ್ಷೆ ಇದೆ ಎಂದು ರೈತ ಮುಖಂಡ ಕರಿಕ್ಯಾತನಹಳ್ಳಿ ತುಳಸಿರಾಜ್ ಹೇಳಿದರು.

# ವರ್ಷಾಂತ್ಯದೊಳಗೆ ರಷ್ಯಾದಿಂದ ಕಚ್ಚಾತೈಲ ಖರೀದಿ ಸ್ಥಗಿತ

## ಡೊನಾಲ್ಡ್ ಟ್ರಂಪ್ ಪುನರುಚ್ಚಾರ | ಮೋದಿಗೆ ಕರೆ ಮಾಡಿ ದೀಪಾವಳಿ ಶುಭಾಶಯ

• ಪ್ರಜೋದಯ ವರದಿ

**ನವದೆಹಲಿ:** ಭಾರತವು ರಷ್ಯಾದಿಂದ ಕಚ್ಚಾತೈಲ ಖರೀದಿಯನ್ನು ಈ ವರ್ಷಾಂತ್ಯದೊಳಗೆ ಬಹುತೇಕ ಸ್ಥಗಿತಗೊಳಿಸಲಿದೆಯೆಂದು ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪುನರುಚ್ಚರಿಸಿದ್ದಾರೆ. ಆದಾಗ್ಯೂ,ಈ ಪ್ರಕ್ರಿಯೆ ನಡೆಯಲು ಸ್ವಲ್ಪ ಕಾಲಾವಕಾಶದ ಅಗತ್ಯವಿದೆ. ಈ ವಿಚಾರದಲ್ಲಿ ಚೀನಾದ ಮನ ವೊಲಿಸಲು ಯತ್ನಿಸುತ್ತಿದ್ದೇನೆಂದು ತಿಳಿಸಿದ್ದಾರೆ.

ರಷ್ಯಾದಿಂದ ಚೀನಾ ಹಾಗು ಭಾರತವು ದೊಡ್ಡ ಪ್ರಮಾಣದಲ್ಲಿ ಕಚ್ಚಾತೈಲ ಖರೀದಿ ಸುತ್ತಿರುವ ರಾಷ್ಟ್ರಗಳಾಗಿವೆ. ಭಾರತವು ರಷ್ಯಾದಿಂದ ಕಚ್ಚಾತೈಲ ಖರೀದಿಯನ್ನು ಸ್ಥಗಿತಗೊಳಿಸಲಿದೆಯೆಂದು ಭರವಸೆ ನೀಡಿತ್ತು. ಈ ಪ್ರಕ್ರಿಯೆಯೂ ನಡೆಯುತ್ತಿದೆ. ಈಗಲೇ ನಿಲ್ಲಿಸಲು ಸಾಧ್ಯವಿಲ್ಲ. ಈ ವರ್ಷಾಂತ್ಯಕ್ಕೆ ಪೂರ್ತಿ ಕಡಿಮೆಯಾಗಲಿದ್ದು, ಬಹುತೇಕ ಕೊನೆಯಾ ಗಲಿದೆ. ಭಾರತ ತನ್ನ ಬೇಡಿಕೆಯ ಶೇ.40ರಷ್ಟು ಕಚ್ಚಾತೈಲವನ್ನು ಅಲ್ಲಿಂದಲೇ ಖರೀದಿಸುತ್ತಿದೆ. ಈ ಕುರಿತು ಪ್ರಧಾನಿ ನರೇಂದ್ರ ಮೋದಿ ಜೊತೆಗೆ ಮಾತನಾಡಿದ್ದೇನೆ. ಅವರು ಕೂಡ ಸಕಾರಾತ್ಮಕವಾಗಿ ಮಾತನಾಡಿದ್ದಾರೆಂದು ಟ್ರಂಪ್ ತಿಳಿಸಿದ್ದಾರೆ.

ರಷ್ಯಾದಿಂದ ಕಚ್ಚಾತೈಲವನ್ನು ಗಣನೀಯವಾಗಿ ಕಡಿಮೆ ಮಾಡಲಾಗುವುದೆಂದು ಭಾರತ ಭರವಸೆ ನೀಡಿದೆ ಎಂದು ಕಳೆದ ಕೆಲವು ದಿನಗಳಿಂದ ಡೊನಾಲ್ಡ್ ಟ್ರಂಪ್ ಹೇಳಿಕೆ ನೀಡುತ್ತಿದ್ದಾರೆ. ರಷ್ಯಾದಿಂದ ಕಚ್ಚಾತೈಲ ಖರೀದಿಸುವ



ಮೂಲಕ ಉಕ್ರೇನ್ ವಿರುದ್ಧದ ಸಂಘರ್ಷಕ್ಕೆ ಭಾರತವು ಪರೋಕ್ಷವಾಗಿ ಆರ್ಥಿಕ ನೆರವು ಒದಗಿಸುತ್ತಿದೆಯೆಂದು ಅಮೇರಿಕಾ ಆರೋಪಿಸುತ್ತಿದೆ.

**ವ್ಯಾಪಾರ ನೀತಿ ಸಮರ್ಥನೆ:** ತನ್ನ ವ್ಯಾಪಾರ ನೀತಿಯನ್ನು ಬಲವಾಗಿ ಸಮರ್ಥಿಸಿಕೊಂಡಿರುವ ಡೊನಾಲ್ಡ್ ಟ್ರಂಪ್, ಅದರಿಂದ ಅಮೇರಿಕಾದ ಅರ್ಥಿಕತೆಯೂ ಮತ್ತಷ್ಟು ಬಲವರ್ಧನೆ ಯಾಗಲಿದೆ ಎಂದು ತಿಳಿಸಿದ್ದಾರೆ.

ಸುಂಕದಿಂದಾಗಿ ಒಂದು ದೇಶವಾಗಿ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸುತ್ತಿದ್ದೇವೆ, ದಶಕದಿಂದಲೂ ನಮ್ಮ ಮೇಲೆ ಸುಂಕ ಹೇರುವ ಮೂಲಕ ದೇಶಕ್ಕೆ ನಿಧಾನವಾಗಿ ಹಾನಿಯುಂಟು ಮಾಡಲಾಗಿತ್ತು. ಅದರಿಂದಾಗಿ ನಾವು 37 ಟ್ರಿಲಿಯನ್ ಡಾಲರ್ ಸಾಲದ ಹೊರೆಗೆ ಸಿಲುಕುವಂತಾಯಿತು. ಈಗ ನಾವು ಶ್ರೀಮಂತ ರಾಷ್ಟ್ರವಾಗಿದ್ದೇವೆ. ನಾವು ಹಿಂದೆಂದೂ ಮಾಡದ ರೀತಿಯಲ್ಲಿ ಹಣವನ್ನು ಪಡೆಯುತ್ತಿದ್ದೇವೆಂದು ಬಲವಾಗಿ ಸಮರ್ಥಿಸಿಕೊಂಡರು.

ಅಮೇರಿಕಾದ ಸಮೃದ್ಧಿಗಾಗಿ ಸುಂಕ ಹೇರುತ್ತಿದ್ದೇನೆ. ಸುಂಕ ಹೇರದಿದ್ದರೆ, ಅಮೇರಿಕಾವೂ ಕೂಡ ಮೂರನೇ ಜಗತ್ತಿನ ರಾಷ್ಟ್ರವಾಗಿರಲಿದೆ. ಇದಕ್ಕೆ ನಾನು ಅವಕಾಶ ಕೊಡುವುದಿಲ್ಲ. ಸುಂಕ ದಿಂದ ನಾವು ಶ್ರೀಮಂತರಾಗುತ್ತಿದ್ದು, ದೇಶವು ಹೆಚ್ಚು ಸುರಕ್ಷಿತವಾಗಿದೆ. ಅದಿಲ್ಲದಿದ್ದರೆ, ನಾವು ಸಂಕಷ್ಟಕ್ಕೆ ಸಿಲುಕಲಿದ್ದೇವೆ ಎಂದು ಸ್ಪಷ್ಟಪಡಿಸಿದ್ದಾರೆ.

### ವ್ಯಾಪಾರ: ಮೋದಿ-ಟ್ರಂಪ್ ಮಾತುಕತೆ

ಭಾರತ ಮತ್ತು ಅಮೇರಿಕಾ ನಡುವಿನ ವ್ಯಾಪಾರ ಕುರಿತು ಪ್ರಧಾನಿ ನರೇಂದ್ರ ಮೋದಿ ಹಾಗು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚರ್ಚಿಸಿದ್ದಾರೆ. ಸುಂಕ ಹೇರಿಕೆ ಬಳಿಕ ಉಭಯ ರಾಷ್ಟ್ರಗಳ ನಡುವಿನ ಸಂಬಂಧ ಹದಗೆಟ್ಟಿರುವ ಮಧ್ಯೆಯೇ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕರೆ ಮಾಡಿ ದೀಪಾವಳಿ ಹಬ್ಬದ ಶುಭಾಶಯ ಕೋರಿದ್ದಾರೆ.

ಶ್ವೇತಭವನದಲ್ಲಿ ಹಮ್ಮಿಕೊಂಡಿದ್ದ ದೀಪಾವಳಿ ಕಾರ್ಯಕ್ರಮದಲ್ಲಿ ದೀಪ ಬೆಳಗಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಮೋದಿ ಅವರೊಂದಿಗೆ ವ್ಯಾಪಾರ ಕುರಿತು ಮಾತ ನಾಡಿರುವೆ ಎಂದು ಹೇಳಿದ್ದಾರೆ. ಟ್ರಂಪ್ ಶುಭಾಶಯಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಸಾಮಾ ಜಿಕ ಜಾಲತಾಣದ ಮೂಲಕ ಧನ್ಯವಾದ ಸಲ್ಲಿಸಿದ್ದಾರೆ. ದೀಪಾ ವಳಿ ಶುಭಾಶಯ ತಿಳಿಸಲು ದೂರವಾಣಿ ಕರೆ ಮಾಡಿದ್ದಕ್ಕೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಧನ್ಯವಾದಗಳು. ಬೆಳಕಿನ ಹಬ್ಬದ ಈ ಸಂದರ್ಭದಲ್ಲಿ ವಿಶ್ವದ ಎರಡು ಪ್ರಮುಖ ಪ್ರಜಾ ಪ್ರಭುತ್ವ ರಾಷ್ಟ್ರಗಳ ಸಂಬಂಧ ಮತ್ತಷ್ಟು ಪ್ರಕಾಶಮಾನವಾಗಲಿದೆ. ಎಲ್ಲ ಮಾದರಿಯ ಭಯೋತ್ಪಾದನೆ ವಿರುದ್ಧ ಒಗ್ಗಟ್ಟಿನಿಂದ ನಿಲ್ಲಬೇಕೆಂದು ಎಕ್ಸ್‌ನಲ್ಲಿ ತಿಳಿಸಿದ್ದಾರೆ. ಮಾತುಕತೆ ವೇಳೆ ಪಾಕಿಸ್ತಾನದ ಯಾವ ವಿಚಾರವೂ ಚರ್ಚೆಗೆ ಬಂದಿಲ್ಲ.

**ಸುಂಕ ಸಮರ:** ಭಾರತದ ಆಮದು ಮಾಡಿಕೊಳ್ಳುವ ವಸ್ತುಗಳಿಗೆ ಅಮೇರಿಕಾವು ಶೇ.50 ರಷ್ಟು ಸುಂಕ ಹೇರುವ ಮೂಲಕ ಉಭಯ ರಾಷ್ಟ್ರಗಳ ನಡುವಿನ ವ್ಯಾಪಾರ ಸಂಬಂಧ ಹದಗೆಟ್ಟಿತ್ತು. ರಷ್ಯಾದಿಂದ ಕಚ್ಚಾತೈಲ ಖರೀದಿಸಿದ್ದಕ್ಕೆ ಶೇ.25ರಷ್ಟು ಹೆಚ್ಚುವರಿ ಸುಂಕ ಹೇರಲಾಗಿತ್ತು. ಅಮೇರಿಕಾದ ಈ ನಿರ್ಧಾರವು ಅನ್ಯಾಯ, ನ್ಯಾಯ ಸಮ್ಮತವಲ್ಲದ ನಿರ್ಧಾರವೆಂದು ಭಾರತ ಟೀಕಿಸಿತ್ತು.

## ರಾಜ್ಯಾಧ್ಯಕ್ಷ ಬದಲಾವಣೆ ಸದ್ಯಕ್ಕಿಲ್ಲ: ಹೆಚ್‌ಡಿಕೆ

• ಪ್ರಜೋದಯ ವರದಿ



**ಬೆಂಗಳೂರು:** ಜೆಡಿಎಸ್ ರಾಜ್ಯಾಧ್ಯಕ್ಷರ ಬದಲಾವಣೆ ಚರ್ಚೆ ಸದ್ಯಕ್ಕೆ ಇಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸ್ಪಷ್ಟಪಡಿಸಿದ್ದಾರೆ.

ಜೆಡಿಎಸ್ ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರಕ್ಕೆ ಪ್ರತಿಕ್ರಿಸಿ, ರಾಜ್ಯಾಧ್ಯಕ್ಷರ ಬದಲಾವಣೆ ಬಗ್ಗೆ ಚರ್ಚೆಗೆ ಬಂದಿಲ್ಲ. ಸದ್ಯ ನಾನೇ ಅಧ್ಯಕ್ಷನಾಗಿದ್ದೇನೆ. ರಾಜ್ಯಾಧ್ಯಕ್ಷ ಬದಲಾವಣೆ ಬೇಡವೆಂದು ಒಂದು ವರ್ಗ ಹೇಳಿದರೆ, ಇನ್ನೊಂದೆಡೆ ನಿಖಿಲ್ ಕುಮಾರಸ್ವಾಮಿಗೆ ಜವಾಬ್ದಾರಿ ಕೊಡ ಬೇಕೆಂದು ಇದೆ. ಆದರೆ, ಇದ್ಯಾವುದರ ಬಗ್ಗೆ ಚರ್ಚೆ ಆಗಿಲ್ಲ, ಸದ್ಯಕ್ಕೆ ಜೆಡಿಎಸ್ ರಾಜ್ಯಾಧ್ಯಕ್ಷ ಬದಲಾವಣೆ ಇಲ್ಲ ಎಂದು ತಿಳಿಸಿದರು.

ಕೋರ್ ಕಮಿಟಿ ಪುನರ್ ರಚನೆ ವಿಚಾರ ಸಂಬಂಧ ಮಾತನಾಡಿ, ಕೋರ್ ಕಮಿಟಿ ಪುನರ್ ರಚನೆ ಬಗ್ಗೆ ನಮ್ಮ ಪಕ್ಷದಲ್ಲಿ ಒಂದು ಸಭೆ ಆಗಿದೆ. ಕೋರ್ ಕಮಿಟಿ ಮತ್ತು ಕಾರ್ಪೋರೇಷನ್ ಚುನಾವಣೆ ಸಂಬಂಧ ಪಕ್ಷ ಸಂಘಟನೆಗೆ ಸಮಿತಿ ಮಾಡುವ ನಿರ್ಧಾರ ಮಾಡಿದ್ದೇವೆ. ಮುಂದಿನ ದಿನಗಳಲ್ಲಿ ಆ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ಹೇಳಿದರು.

ಸಮನ್ವಯ ಸಮಿತಿ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಶೀಘ್ರವೇ ಜೆಡಿಎಸ್-ಬಿಜೆಪಿ ನಡುವೆ ಸಮನ್ವಯ ಸಮಿತಿ ರಚನೆ ಆಗಲಿದೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು, ಬಿಜೆಪಿ ನಾಯಕರು ಬಂದು ಚರ್ಚೆ ಮಾಡಿದ್ದಾರೆ. ಬೆಂಗಳೂರಿಗೆ ಒಂದು, ರಾಜ್ಯಕ್ಕೆ ಒಂದು ಸಮನ್ವಯ ಸಮಿತಿ ರಚನೆ ಬಗ್ಗೆ ತೀರ್ಮಾನ ಆಗಿದೆ. ಒಂದು ವಾರ ಅಥವಾ 10 ದಿನಗಳಲ್ಲಿ ಅದರ ಬಗ್ಗೆ ಅಂತಿಮ ತೀರ್ಮಾನ ಮಾಡುತ್ತೇವೆಂದು ತಿಳಿಸಿದರು.

ಸತೀಶ್ ಜಾರಕಿಹೊಳಿ ಮುಖ್ಯಮಂತ್ರಿಯಾಗಲಿ ಎಂಬ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಅವರ ಪಕ್ಷದ ಬೆಳವಣಿಗೆಗಳು ಏನಿದೆ ನಾವು ಅದರ ಬಗ್ಗೆ ಚರ್ಚೆ ಮಾಡುವ ಅವಶ್ಯಕತೆ ಇಲ್ಲ. ಅವರ ಪಕ್ಷದಲ್ಲಿ ಏನೇನು ಬೇಕು ಅವರು ತೀರ್ಮಾನ ಮಾಡಿಕೊಳ್ಳಲಿ ಎಂದರು.

# ಹಾಸನಾಂಬ ದೇವಿ ದರ್ಶನಕ್ಕೆತೆರೆ

» ಮೊದಲನೇ ಪುಟದಿಂದ



ದೇವಾಲಯದ ಆಡಳಿತಾಧಿಕಾರಿ ಮಾರುತಿ ಅವರ ಸಮಾಕ್ಷಮದಲ್ಲಿ ದೇವಾಲಯದ ಪ್ರಧಾನ ಅರ್ಚಕ ನಾಗರಾಜು ಅವರು ಹಾಸನಾಂಬ ದೇವಿ ಗರ್ಭಗುಡಿ ಬಾಗಿಲಿಗೆ ಬೀಗ ಹಾಕಿದರು. ಈ ಮೂಲಕ 15 ದಿನಗಳ ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ಅದ್ದೂರಿ ತೆರೆ ಬಿದ್ದಿತು. ಗರ್ಭಗುಡಿ ಬಾಗಿಲು ಮುಚ್ಚುವ ಮೊದಲು ನೆರೆದಿದ್ದ ಭಕ್ತರಿಗೆ ವಿಶ್ವರೂಪ ದರ್ಶನಕ್ಕೆ ಅವಕಾಶ ನೀಡಲಾಯಿತು.

ಈ ಬಾರಿಯ 13 ದಿನಗಳ ಸಾರ್ವಜನಿಕ ದರ್ಶನದಲ್ಲಿ ಒಟ್ಟು 26.13 ಲಕ್ಷಕ್ಕೂ ಹೆಚ್ಚಿನ ಭಕ್ತರು ದೇವಿಯ ದರ್ಶನ ಪಡೆದಿದ್ದಾರೆ. ಕಳೆದ ವರ್ಷ 11 ದಿನಗಳಲ್ಲಿ ಒಟ್ಟು 17,47,240 ಜನರು ಭಕ್ತರು ದರ್ಶನ ಪಡೆದುಕೊಂಡಿದ್ದರು. ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ 8 ಲಕ್ಷಕ್ಕೂ ಅಧಿಕ ಭಕ್ತರು ದರ್ಶನ ಪಡೆದುಕೊಂಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಸಚಿವರು, ಶಾಸಕರು, ಚಲನಚಿತ್ರ ನಟ, ನಟಿಯರು ವಿವಿಧ ಕ್ಷೇತ್ರದ ಗಣ್ಯರು ದೇವಿಯ ದರ್ಶನ ಪಡೆದು ಪುನೀತರಾಗಿದ್ದಾರೆ. ಸಾರ್ವಜನಿಕ ದರ್ಶನದಲ್ಲಿ ವಿವಿಐಪಿ ಪಾಸ್‌ಗಳ ರದ್ದು ಮಾಡಿ ಗೋಲ್ಡ್ ಪಾಸ್, ಶಿಷ್ಟಾಚಾರದ ಸಮಯ ನಿಗದಿ ಮಾಡಿದ್ದರಿಂದ ಸಾರ್ವಜನಿಕರಿಗೆ ಹಾಸನಾಂಬ ದೇವಿ ಸುಗಮವಾಗಿ ದರ್ಶನ ಆಗಿದೆ. ಮಳೆ, ನಿರೀಕ್ಷೆಗೂ ಮೀರಿದ ಸಂಖ್ಯೆಯಲ್ಲಿ ಭಕ್ತರು ಬಂದಿದ್ದರಿಂದ ದರ್ಶನ ಸಮಯ ವಿಳಂಬ ಬಿಟ್ಟರೆ ಉಳಿದಂತೆ ಜಾತ್ರಾ ಮಹೋತ್ಸವ ಯಶಸ್ವಿಯಾಗಿ ನಡೆದಿದೆ.

### ಜಾತ್ರಾ ಮಹೋತ್ಸವದ ಖರ್ಚು-ವೆಚ್ಚ ಶೀಘ್ರವೇ ಪ್ರಕಟ

» ಮೊದಲನೇ ಪುಟದಿಂದ

ಗೃಹಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ ಅವರು ಮಾತನಾಡಿ, ಕೃಷ್ಣಬೈರೇಗೌಡ ಅವರು ಹೊಸದಾಗಿ ಜಿಲ್ಲಾ ಉಸ್ತುವಾರಿ ಸಚಿವರಾಗಿ ಬಂದಾಗ ಜಾತ್ರಾ ಮಹೋತ್ಸವ ಎದುರಾಯಿತು. ಕಳೆದ ಬಾರಿ ಅವ್ಯವಸ್ಥೆಯಾಗಿತ್ತು. ಅದನ್ನು ಸರಿಪಡಿಸಿ ಶಾಂತಿಯುತವಾಗಿ ದರ್ಶನ ಆಗಲು ಜಿಲ್ಲಾಡಳಿತ, ಸಚಿವರ ಜಾಣ್ಮೆ ಕಾರ್ಯವೈಖರಿಯಿಂದ ಎಲ್ಲವನ್ನೂ ಕಾಲಕಾಲಕ್ಕೆ ಸರಿಪಡಿಸಿ ಯಶಸ್ವಿಯಾದ ಜಾತ್ರೆ ಮಾಡಿದ್ದಾರೆ. ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಕಂದಾಯ ಇಲಾಖೆ, ಪೌರಕಾರ್ಮಿಕರು, ವಿದ್ಯುತ್ ಇಲಾಖೆ, ಅಗ್ನಿಶಾಮಕದಳ, ಡಿಎಫ್‌ಓ ಸೇರಿ ಎಲ್ಲಾ ಇಲಾಖೆಯವರು ಪ್ರಾಮಾಣಿಕವಾಗಿ ಕೆಲಸ ಮಾಡಿದ್ದಾರೆ. ಹಗಲು ರಾತ್ರಿ ದುಡಿದಿದ್ದಾರೆ. ಇದಕ್ಕೆ ಜಿಲ್ಲೆಯ ಜನರು ಋಣಿಗಳಾಗಿರಬೇಕು. ಎಲ್ಲರಿಗೂ ರಾಜ್ಯದ ಜನರ ಪರವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಬಂದಾಗ ನಾವ್ಯಾರು ಇರಲಿಲ್ಲ. ಪ್ರೋಟೋಕಾಲ್ ಪ್ರಕಾರ ಅವರನ್ನು ನಡೆಸಿಕೊಳ್ಳಬೇಕಿತ್ತು. ಅದರಲ್ಲಿ ವ್ಯತ್ಯಾಸವಾಗಿದೆ ಅದಕ್ಕೆ ವಿಷಾದಿಸುತ್ತೇವೆ ಎಂದರು.

ಶಾಸಕ ಹೆಚ್.ಪಿ.ಸ್ವರೂಪ್ ಅವರು ಮಾತನಾಡಿ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಬಂದಾಗ ವ್ಯತ್ಯಾಸವಾಗಿದೆ. ಅದು ನಮ್ಮ ಕಾರ್ಯಕರ್ತರಿಗೆ ಸ್ವಲ್ಪ ನೋವಾಗಿತ್ತು. ಅದನ್ನು ಬಿಟ್ಟರೆ ವೈಯಕ್ತಿಕವಾಗಿ ಬೇರೇನೂ ಇಲ್ಲ ಎಂದರು.

### ಕೆಂಡ ಹಾಯ್ದ ಜಿಲ್ಲಾಧಿಕಾರಿ

**ಹಾಸನ:** ಹಾಸನಾಂಬ ದರ್ಶನೋತ್ಸವ ಮತ್ತು ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವದ ಕೊನೆಯ ದಿನವಾದ ಗುರುವಾರ ಬೆಳಿಗ್ಗೆ ನಡೆದ ಕೆಂಡೋತ್ಸವದಲ್ಲಿ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅವರು ಭಾಗವಹಿಸಿ, ಕೆಂಡ ಹಾಯುವುದರ ಮೂಲಕ ಎಲ್ಲರ ಗಮನ ಸೆಳೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಕೆಂಡೋತ್ಸವದ ತಯಾರಿ ಹಾಗು ಕಾರ್ಯಕ್ರಮ ನೋಡಲು ಬಂದೆ. ಮಹಿಳೆಯರು ಕೆಂಡ ಹಾಯುತ್ತಿದ್ದನ್ನು ಕಂಡು ನನಗೂ ಕೆಂಡ ಹಾಯಬೇಕೆನಿಸಿತು. ಬೆಂಕಿಯ ಕಾವು ಮುಖಕ್ಕೆ ತಾಕುತ್ತಿತ್ತು, ಸ್ವಲ್ಪ ಭಯವೂ ಆಯಿತು. ಆದರೂ ಆ ಭಕ್ತಿಭಾವನೆ ನನ್ನೊಳಗೆ ಮೂಡಿ ಕೆಂಡ ಹಾಯ್ದೆ. ಇದೇ ಮೊದಲ ಬಾರಿಗೆ ಕೆಂಡ ಹಾಯಿದಿದ್ದು, ಬಹಳ ಸಂತೋಷವಾಗಿದೆ ಎಂದು ಹೇಳಿದರು. ಜಾತ್ರೆಯ ಅಂತಿಮ ಹಂತದಲ್ಲಿ ನಡೆದ ಕೆಂಡೋತ್ಸವದಲ್ಲಿ ಜಿಲ್ಲೆಯ ಹಿರಿಯ ಅಧಿಕಾರಿಗಳೂ ಕೂಡ ಭಾಗಿಯಾಗಿ ಕೆಂಡ ತುಳಿದರು.

## ಆರ್‌ಎಸ್‌ಎಸ್‌ಗೆ ಹಣ ಎಲ್ಲಿಂದ ಬರುತ್ತೆ

• ಪ್ರಜೋದಯ ವರದಿ



**ಬೆಂಗಳೂರು:** ನೋಂದಣಿಯೇ ಆಗದ ರಾಷ್ಟ್ರೀಯ ಸ್ವಯಂ ಸೇವಕ ಸಂಘಕ್ಕೆ (ಆರ್‌ಎಸ್‌ಎಸ್) ಹಣ ಎಲ್ಲಿಂದ ಬರುತ್ತಿದೆಯೆಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಅವರು ಪ್ರಶ್ನಿಸಿದರು.

ಸುದ್ದಿಗಾರರೊಂದಿಗೆ ಗುರುವಾರ ಮಾತನಾಡಿ, ಕಾರ್ಯಕ್ರಮ ಆಯೋಜಿಸಲು ಅವರಿಗೆ ಜನರು ಸ್ವಯಂ ಪ್ರೇರಿತರಾಗಿ ದೇಣಿಗೆ ನೀಡುತ್ತಾರೆಯೇ ಅಥವಾ ಎಲ್ಲಿಂದ ಹಣ ಬರುತ್ತಿದೆ ಎಂಬುದನ್ನು ಹೇಳಬೇಕಲ್ಲವೇ ಎಂದರು.

ಆರ್‌ಎಸ್‌ಎಸ್ ನೋಂದಣಿ, ಹಣಕಾಸು ವ್ಯವಹಾರ ಪ್ರಶ್ನಿಸಿದ ಕಾರಣಕ್ಕೆ ಬಿಜೆಪಿ ನಾಯಕರು ನನ್ನ ಕುಟುಂಬ ಹಾಗು ಸಮುದಾಯದ ಕುರಿತು ವೈಯಕ್ತಿಕವಾಗಿ ಟೀಕಿಸುವ ಮೂಲಕ ಬೌದ್ಧಿಕ ದಿವಾಳಿತನ ಪ್ರದರ್ಶಿಸಿದ್ದಾರೆಂದು ಟೀಕಿಸಿದರು.

ಆರ್‌ಎಸ್‌ಎಸ್ ಕುರಿತು ಪ್ರಶ್ನಿಸಿದರೆ ನನ್ನ ಆಸ್ತಿ ಕುರಿತು ಮಾತನಾಡುತ್ತಾರೆ. ಆದಾಯ ತೆರಿಗೆ ಇಲಾಖೆ ಮತ್ತು ಜಾರಿ ನಿರ್ದೇಶನಾಲಯ ಬಿಜೆಪಿ ಯವರ ಕೈಯಲ್ಲೇ ಇದೆ. ತನಿಖೆ ಮಾಡಲಿ ಎಂದು ತಿರುಗೇಟು ನೀಡಿದರು.

ಆರ್‌ಎಸ್‌ಎಸ್ ಹೆಸರಿನಲ್ಲಿ ಯಾವುದಾದರೂ ಕಟ್ಟಡ ಇದ್ದರೆ ತೋರಿಸಲಿ ಎಂಬ ಬಿಜೆಪಿ ನಾಯಕರ ಪ್ರಶ್ನೆ ಕುರಿತಂತೆ ಪ್ರತಿಕ್ರಿಯಿಸಿದ ಪ್ರಿಯಾಂಕ, ಆರ್‌ಎಸ್‌ಎಸ್ ಹೆಸರಿನಲ್ಲಿ ಯಾವುದೇ ಕಟ್ಟಡ ಇಲ್ಲ ಎಂಬುದನ್ನು ನಾನೇ ಹೇಳಿದ್ದೇನೆಂದರು.

### ಹೈಕಮಾಂಡ್‌ಗೆ ಸಂಪನ್ಮೂಲ

ಬಿಹಾರ ಚುನಾವಣೆಗಾಗಿ ಕರ್ನಾಟಕದಲ್ಲಿ ಸಚಿವರು ಅಧಿಕಾರಿಗಳಿಂದ ವಸೂಲಿ ಮಾಡುತ್ತಿದ್ದಾರೆಂಬ ಆರೋಪದ ಬಗ್ಗೆ ಬಿಜೆಪಿಯನ್ನು ಟೀಕಿಸಿರುವ ಸಚಿವ ಪ್ರಿಯಾಂಕ ಖರ್ಗೆ, ರಾಜ್ಯದ ಸಂಪನ್ಮೂಲಗಳನ್ನು ಹೈಕಮಾಂಡ್‌ಗೆ ತಿರುಗಿಸಿದ ಕೀರ್ತಿ ಬಿಜೆಪಿಗೆ ಸಲ್ಲುತ್ತದೆಂದಿದ್ದಾರೆ.

ಬಿಜೆಪಿ ಹೈಕಮಾಂಡ್‌ಗೆ 1800 ಕೋಟಿ ರೂ. ನೀಡಿದ್ದನ್ನು ಯಡಿಯೂರಪ್ಪ ಹಾಗು ದಿ||ಅನಂತ್ ಕುಮಾರ್ ಅವರ ಸಂಭಾಷಣೆಯಲ್ಲಿ ಬಹಿರಂಗವಾಗಿದ್ದನ್ನು ಬಿಜೆಪಿ ನಾಯಕರು ಮರೆತಿದ್ದಾರೆಯೇ. ಮರೆತಿದ್ದರೆ, ನಾವು ಮತ್ತೊಮ್ಮೆ ನೆನಪಿಸುತ್ತಿದ್ದೇವೆ ಎಂದಿದ್ದಾರೆ.

ಸಂಸದ ಬಿ.ವೈ.ರಾಘವೇಂದ್ರ ಅವರು ತಮ್ಮ ಪೂಜ್ಯ ತಂದೆಯವರ ಮಾತುಗಳನ್ನು ಒಮ್ಮೆ ಕಿವಿಗೊಟ್ಟು ಕೇಳಿಸಿಕೊಂಡು ನಂತರ ಮಾತನಾಡಿದರೆ ಉತ್ತಮ ಎಂದು ಬರೆದಿದ್ದಾರೆ.

ಭೀಮ್ ಆರ್ಮಿ ಸಂಘಟನೆ ಚಿತ್ತಾಪುರದಲ್ಲಿ ನ.2 ರಂದು ರ‍್ಯಾಲಿಗೆ ಅನುಮತಿ ಕೇಳಿರುವ ವಿಚಾರವಾಗಿ ಮಾತನಾಡಿದ ಪ್ರಿಯಾಂಕ್, ಇದೇ 24ರಂದು ನ್ಯಾಯಾಲಯ ಏನು ತೀರ್ಪು ನೀಡಲಿದೆಯೊ ನೋಡಬೇಕು. ಯಾರೇ ಪಥ ಸಂಚಲನ ನಡೆಸಿದರೂ ಅನುಮತಿ ತೆಗೆದುಕೊಂಡು ಮಾಡಬೇಕೆಂದರು.

ಬೆಂಗಾವಲು ವಾಹನ ಬಳಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಜನರು ನಮ್ಮೊಂದಿಗಿದ್ದಾರೆ. ಯಾವ ಬೆಂಗಾವಲು ವಾಹನವೂ ಬೇಡ. ಮೂರು ದಿನ ಬೆಂಗಾವಲು ವಾಹನವನ್ನೇ ಬಳಸಿಲ್ಲ ಎಂದರು. ಆರ್‌ಎಸ್‌ಎಸ್ ಹೆಸರಿನಲ್ಲಿ ಹಲವರು ಬೆದರಿಕೆ ಹಾಕಿ ದ ಕಾರಣ, ಗುಪ್ತಚರ ವರದಿ ಆಧರಿಸಿ ಗೃಹ ಇಲಾಖೆ ಯು ಪ್ರಿಯಾಂಕ ಅವರಿಗೆ ಭದ್ರತೆ ಹೆಚ್ಚಿಸಿತ್ತು.

## ಇಂದು ಜಿಲ್ಲೆಯಲ್ಲಿ ಯೆಲ್ಲೋ ಅಲರ್ಟ್

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ವಿವಿಧೆಡೆ ಗುಡುಗು ಸಹಿತ ಭಾರೀ ಮಳೆಯಾಗುವ ಹಿನ್ನಲೆ ಜಿಲ್ಲೆಯಲ್ಲಿ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ.

ಗಾಳಿಯ ವೇಗ ಗಂಟೆಗೆ 30-40 ಕಿ.ಮೀ. ಇರಲಿದ್ದು, ಗುಡ್ಡ ಪ್ರದೇಶದಲ್ಲಿ ಭೂಕುಸಿತವಾಗುವ ಸಾಧ್ಯತೆ ಇದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇನ್ನೂ ಮೂರ್ನಾಲ್ಕು ದಿನಗಳ ಕಾಲ ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಲಾಗಿದೆ.

ಗುರುವಾರ ಬೆಳಿಗ್ಗೆ 8.30ಕ್ಕೆ ಕೊನೆಗೊಂಡಂತೆ ಸಕಲೇಶಪುರ ತಾಲ್ಲೂಕಿನ ಹಾನುಬಾಳು, ಹೆತ್ತೂರು, ಯಸಳೂರು, ಅರಕಲಗೂಡು ತಾಲ್ಲೂಕಿನ ಕೊಣನೂರು ಹೋಬಳಿ ವ್ಯಾಪ್ತಿಯಲ್ಲಿ ತಲಾ 3 ಇಂಚು ಮಳೆಯಾಗಿದೆ. ಉಳಿದಂತೆ ಎಲ್ಲೆಡೆ 2 ಇಂಚು ಮೇಲ್ಪಟ್ಟು ಮಳೆಯಾಗಿದೆ.

## ಪ್ರತ್ಯೇಕ ಅಪಘಾತ: ಇಬ್ಬರ ಸಾವು

• ಪ್ರಜೋದಯ ವರದಿ

**ಹಾಸನ:** ಬೇಲೂರು ಹಾಗು ಹಾಸನ ಗ್ರಾಮಾಂತರ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟಿದ್ದಾರೆ.

ಕಾರು ಅಪಘಾತವಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಬೇಲೂರು-ಗೆಂಡೇಹಳ್ಳಿ ರಸ್ತೆಯ ಗೋರಿಮಠ ಪಲ್ವರ್ ಮಷಿನ್ ಬಳಿ ನಡೆದಿದೆ. ಬೇಲೂರು ತಾಲ್ಲೂಕು ಅದುಮನಹಳ್ಳಿ ಗ್ರಾಮದ ರಾಜೇಗೌಡ (50) ಮೃತರು. ದೇವಲಾಪುರ ಹತ್ತಿರ ಚಿಲ್ಲರೆ ಅಂಗಡಿ ನಡೆಸುತ್ತಿದ್ದ ರಾಜೇಗೌಡ ಅ.22ರ ರಾತ್ರಿ 9ರ ಸಮಯದಲ್ಲಿ ಅಂಗಡಿ ಬಾಗಿಲು ಹಾಕಿ ಮನೆಗೆ ಹೋಗುತ್ತಿದ್ದಾಗ ಎದುರುಗಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ತಲೆ ಹಾಗು ಎದೆಭಾಗಕ್ಕೆ ಬಲ ವಾದ ಏಟು ಬಿದ್ದ ಪರಿಣಾಮ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಬೈಕ್‌ಗಳ ನಡುವೆ ಸಂಭವಿಸಿದ ಮುಖಾಮುಖಿ ಡಿಕ್ಕಿಯಲ್ಲಿ ವ್ಯಕ್ತಿ ಮೃತಪಟ್ಟಿರುವ ಘಟನೆ ಹಾಸನ ತಾಲ್ಲೂಕಿನ ಪಿರುಮೆನಹಳ್ಳಿಯಲ್ಲಿ ನಡೆದಿದೆ. ತುಮಕೂರು ಜಿಲ್ಲೆ ಅರೇಹಳ್ಳಿ ಗ್ರಾಮದ ಪುಟ್ಟರಾಜು (55) ಮೃತರು. ಹಾಸನದಲ್ಲಿ ಕೃಷಿ ಕೆಲಸ ಮಾಡಿ ಕೊಂಡಿದ್ದ ಅವರು ಡೈರಿಗೆ ಹಾಲು ಹಾಕಲೆಂದು ಪಿರುಮೆನಹಳ್ಳಿಗೆ ಬರುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಮತ್ತೊಂದು ಬೈಕ್ ಡಿಕ್ಕಿಯಾಗಿದೆ. ಗಂಭೀರ ಗಾಯವಾಗಿ ಸ್ಥಳದಲ್ಲೇ ಮೃತ ಪಟ್ಟಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಿತ್ತೂರು ರಾಣಿ ಚೆನ್ನಮ್ಮ ಸಾಧನೆ ಎಲ್ಲರಿಗೂ ಸ್ಫೂರ್ತಿ

• ಪ್ರಜೋದಯ ವರದಿ

**ಬೇಲೂರು:** ಭಾರತದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಅವರ ಸಾಧನೆ ಇಂದಿನ ಹಾಗೂ ಮುಂದಿನ ಪೀಳಿಗೆಗೆ ಸ್ಫೂರ್ತಿ ಎಂದು ತಹಶೀಲ್ದಾರ್ ಶ್ರೀಧರ್ ಕಂಕನವಾಡಿ ಅವರು ಹೇಳಿದರು.

ಕಿತ್ತೂರು ರಾಣಿ ಚೆನ್ನಮ್ಮ ಜನ್ಮ ದಿನಾಚರಣೆ ಅಂಗವಾಗಿ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯ ರಕ್ಷಣೆ ಗಾಗಿ ಕತ್ತಿ ಹಿಡಿದು ಶೌರ್ಯ ಹಾಗೂ ವೀರಾವೇಶದ ಹೋರಾಟ ಮೈಗೂಡಿಸಿ ಕೊಂಡು ಬ್ರಿಟೀಷರ ವಿರುದ್ಧ ಯುದ್ಧದಲ್ಲಿ ಗೆಲುವು ಸಾಧಿಸಿ ರಾಜ್ಯಭಾರ ಮಾಡಿದ ಕೆಚ್ಚೆದೆಯ ಆಡಳಿತ ಗಾರ್ತಿ ಮಹಿಳೆಯೇ ಕಿತ್ತೂರು ರಾಣಿ ಚೆನ್ನಮ್ಮ. ಅವರ ಆಡಳಿತ ಇತರೆ ರಾಜ್ಯದವರಿಗೆ ಮಾದರಿ. ಆದ್ದರಿಂದ ಕಿತ್ತೂರು ರಾಣಿ ಚೆನ್ನಮ್ಮರ ತತ್ವ ಸಿದ್ಧಾಂತ ಮತ್ತು ಆದರ್ಶಗಳು ಇಂದಿನ ಯುವ ಪೀಳಿಗೆಗೆ ಮಾದರಿಯಾಗಿದ್ದು, ಜೀವನದಲ್ಲಿ ಅಳವಡಿಸಿಕೊಂಡು ಚೆನ್ನಮ್ಮರಂತೆ ಸಾಗ ಬೇಕೆಂದರು.

ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಮಾ.ನಾ.ಮಂಜೇಗೌಡ ಅವರು ಮಾತನಾಡಿ,



ಭಾರತದ ಮೊದಲ ಸ್ವಾತಂತ್ರ್ಯ ಹೋರಟಾಗಾರ್ತಿಯರಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಮೊದಲಿಗರಾಗಿ ಕಾಣಿಸಿ ಕೊಳ್ಳುತ್ತಾರೆ. ಕನ್ನಡತಿಯಾಗಿ ಬ್ರಿಟೀಷ್ ಸರ್ಕಾರದ ವಿರುದ್ಧ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಸೈನ್ಯವನ್ನು ಪ್ರಥಮವಾಗಿ ಸೋಲಿಸುತ್ತಾರೆ. ಯುದ್ಧದಲ್ಲಿ ನಮ್ಮವರೇ ಕುತಂತ್ರ ನಡೆಸಿದ್ದರಿಂದ ಸೋಲನಪ್ಪಿದರು. ಬ್ರಿಟೀಷರು ರಾಣಿ ಚೆನ್ನಮ್ಮನನ್ನು ಬಂಧಿಸಿ ಜೈಲಿಗಟ್ಟುತ್ತಾರೆ. ಧೃತಿಗೆಡದೆ ಜೈಲಿನಲಿದ್ದೆ ತಮ್ಮ ಸೈನಿಕರು ಮತ್ತು ಜನರನ್ನು ಹುರುದುಂಬಿಸಿ ಆತ್ಮಸ್ಥೈರ್ಯ ತುಂಬಿ ಎಲ್ಲೆಲ್ಲೂ ಸ್ವಾತಂತ್ರ್ಯ ಹೋರಾಟಕ್ಕೆ ಬೆಂಬಲಿಸುತ್ತಾರೆ. ಬ್ರಿಟೀಷರಿಗೆ ಶರಣಾಗದೆ ಜೈಲಿನಲ್ಲೇ ಪ್ರಾಣ ಬಿಟ್ಟು ತಾನೊಬ್ಬ ವೀರಮಹಿಳೆ ಎಂಬುದನ್ನು ತೋರಿಸಿದ್ದಾರೆಂದರು.

ಜಿಲ್ಲಾ ಕೆಡಿಪಿ ಸದಸ್ಯೆ ಸೌಮ್ಯ ಮಾತನಾಡಿ, ಸೌಟು ಹಿಡಿದು ಅಡುಗೆ ಮನೆಯಲ್ಲಿ ಕೂರುವ ಸಂದರ್ಭದಲ್ಲೇ ಕಿತ್ತೂರು ರಾಣಿ ಚೆನ್ನಮ್ಮ ಬ್ರಿಟೀಷರ ವಿರುದ್ಧದ ಸ್ವಾತಂತ್ರ್ಯ ಹೋರಾಟದ ಯುದ್ಧದಲ್ಲಿ ತಮ್ಮ ಚಾಕ ಚಕ್ಯತೆ ಮೂಡಿಸಿ ಎದುರಾಳಿಗಳಲ್ಲಿ ನಡುಕ ಹುಟ್ಟಿಸಿದವರು. ರಾಣಿ ಚೆನ್ನಮ್ಮ ಇಂದಿನ ಮಹಿಳೆಯರಿಗೆ ಮಾದರಿ ಮತ್ತು ಸ್ಫೂರ್ತಿಯಾಗಿದ್ದಾರೆ ಎಂದರು.

ಕೆಡಿಪಿ ಸದಸ್ಯೆ ಜ್ಯೋತಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಭಾಗ್ಯ, ಇಸಿಓ ಶಿವಪ್ಪ, ಇಲಾಖೆ ಅಧಿಕಾರಿಗಳು ಹಾಗು ಸಿಬ್ಬಂದಿ ಇದ್ದರು.

## ಸತೀಶ್ ಜಾರಕಿಹೋಳಿಯತ್ತ ಸಿದ್ದು ಬಣದ ಚಿತ್ತ

» ಮೊದಲನೇ ಪುಟದಿಂದ

ಚರ್ಚೆಗೆ ಗ್ರಾಸವಾಗಿರುವ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಎಳ ಸುತನದಿಂದ ಕೂಡಿದೆ. ಅವರ ಮಾತಿನ್ನೂ ಬಲಿತಿಲ್ಲ. ಜೊತೆಗೆ ಶಕ್ತಿಯೂ ಇಲ್ಲ. ಅವರು ವಿಧಾನ ಪರಿ ಷತ್ ಸದಸ್ಯರೇ ಹೊರತು ವಿಧಾನ ಸಭಾ ಸದಸ್ಯರಲ್ಲ. ಅವರು ತಮ್ಮ ಇತಿ ಮಿತಿಗಳನ್ನು ಅರಿತು ಗೌರವಯುತ ಹೇಳಿಕೆ ನೀಡಬೇಕೆಂದು ಶಾಸಕ ಹೆಚ್.ಎ.ಇಕ್ಬಾಲ್ ತಿರುಗೇಟು ನೀಡಿದ್ದಾರೆ.

ಮುಖ್ಯಮಂತ್ರಿ ಬದಲಾವಣೆ ವಿಷ ಯದಲ್ಲಿ ಗೊಂದಲ ಸೃಷ್ಟಿಸಬಾರದು. ಈ ಬಗ್ಗೆ ನಾವೇನಾದರೂ ಹೇಳಿಕೆ ಕೊಟ್ಟರೆ ನೋಟೀಸ್ ಕೊಡುತ್ತಾರೆ. ಅಂದರೆ ನಾವು ಮಾಡಿದ್ರೆ ಬಲಾತ್ಕಾರ, ಬೇರೆಯವರು ಮಾಡಿದ್ರೆ ಚಮತ್ಕಾರ ಅನ್ನುವ ಪರಿಸ್ಥಿತಿ ಇದೆ. ದೊಡ್ಡ ಮನೆತನದ ದೊಡ್ಡ ಸ್ಥಾನದಲ್ಲಿರುವ ಯತೀಂದ್ರ ಅವರು, ತಾವಾಗೇ ಕೆಳಗಡೆ ಬೀಳೋದು ನಮಗಿ ಷ್ಟವಿಲ್ಲ. ಅವರು ಈ ರೀತಿ ಹೇಳಿಕೆಗಳನ್ನು ನೀಡದೆ ತಿದ್ದಿಕೊಳ್ಳು ತ್ತಾರೆಂಬ ವಿಶ್ವಾಸವಿದೆ ಎಂದು ಹೇಳಿದರು.

ರಾಜ್ಯದಲ್ಲಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಉತ್ತಮ ಕೆಲಸ ಮಾಡುತ್ತಿದೆ. 2028 ರಲ್ಲೂ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮಿಸುತ್ತಿದ್ದಾರೆ. ಯುವ ಕಾಂಗ್ರೆಸ್‌ನಿಂದ ಕೆಪಿಸಿಸಿ ಅಧ್ಯಕ್ಷ ಸ್ಥಾನದವರೆಗೆ ಬಂದಿ ರುವ ಶಿವಕುಮಾರ್ ಅವರು ಸಮರ್ಥ ನಾಯಕ. ಪಕ್ಷ ಸಂಘ ಟನೆಗೆ ಹೆಚ್ಚಿನ ಶ್ರಮ ಹಾಕುತ್ತಾ, ನಮಗೆಲ್ಲಾ ಶಕ್ತಿ ತುಂಬುತ್ತಿ ದ್ದಾರೆ. ಹೀಗಿರುವಾಗ ಮುಖ್ಯಮಂತ್ರಿ ಬದಲಾ ವಣೆ ವಿಷಯ ದಲ್ಲಿ ಯಾರೂ ಗೊಂದಲದ ಹೇಳಿಕೆ ನೀಡಬಾರದೆಂದರು.

## ಅ.24 ರಂದು ವಿಶೇಷ ಸಭೆ

• ಪ್ರಜೋದಯ ವರದಿ

**ಹಾಸನ:** ಮಹಾನಗರ ಪಾಲಿಕೆಯ ರಾಷ್ಟ್ರಕವಿ ಕುವೆಂಪು ಸಭಾಂಗಣದಲ್ಲಿ ಅ.24 ರಂದು ಬೆಳಿಗ್ಗೆ 10.15 ಗಂಟೆಗೆ ಮಹಾಪೌರರಾದ ಗಿರೀಶ್ ಚನ್ನವೀರಪ್ಪ ಅವರ ಅಧ್ಯಕ್ಷತೆಯಲ್ಲಿ ವಿಶೇಷ ಸಭೆಯನ್ನು ಕರೆಯಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

## ಚುನಾವಣಾ ಸ್ಪರ್ಧೆಯಿಂದ ಹಿಂದೆ ಸರಿದ ಜವರೇಗೌಡ

• ಪ್ರಜೋದಯ ವರದಿ

**ಹಾಸನ:** ಸಂಜೀವಿನಿ ಸಹಕಾರಿ ಹಾಗು ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಗೆ ಅ. 26ರ ಭಾನುವಾರ ಚುನಾವಣೆ ನಡೆಯಲಿದೆ.

ಈ ನಡುವೆ ವೈದ್ಯಕೀಯ ಸಹಕಾರಿ ವರ್ಗದಿಂದ ಸ್ಪರ್ಧೆ ಬಯಸಿದ್ದ ಜವರೇಗೌಡ ಅವರು ಚುನಾವಣಾ ಕಣದಿಂದ ಹಿಂದೆ ಸರಿದಿದ್ದು, ಹೆಚ್.ಟಿ.ಚಂದ್ರಶೇಖರ್ ಅವರಿಗೆ ಬೆಂಬಲಿಸುವುದಾಗಿ ಘೋಷಿಸಿದ್ದಾರೆ. ಮತದಾರ ಸ್ನೇಹಿತರು ಚಂದ್ರಶೇಖರ್‌ಗೆ ಮತ ನೀಡುವಂತೆ ಮನವಿ ಮಾಡಿದ್ದಾರೆ.

## ನನ್ನ ನೆಚ್ಚಿನ ಪುಸ್ತಕ ಓದು-ಅವಲೋಕನ ಕಾರ್ಯಕ್ರಮ

• ಪ್ರಜೋದಯ ವರದಿ

**ಹಾಸನ:** ನಗರದ ಎಂ.ಜಿ.ರಸ್ತೆಯಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ ಮತ್ತು ಕಾಲೇಜು ವತಿಯಿಂದ ನನ್ನ ನೆಚ್ಚಿನ ಪುಸ್ತಕ ಓದು ಮತ್ತು ಅವಲೋಕನ ಕಾರ್ಯಕ್ರಮ ನಡೆಯಿತು.

ಸಮಾರಂಭ ಉದ್ಘಾಟಿಸಿದ ಸಾಹಿತಿ ರೂಪ ಹಾಸನ ಅವರು ಮಾತನಾಡಿ, ಪುಸ್ತಕವನ್ನು ಓದುವ ಮಹತ್ವ ಹಾಗು ಅದರಿಂದ ಆಗುವ ಪ್ರಯೋಜನ ಅತ್ಯಧಿಕವಾಗಿದೆ. ಪುಸ್ತಕ ಓದುವು ದರಿಂದ ಜ್ಞಾನ ವೃದ್ಧಿಯಾಗಲಿದ್ದು, ಹೆಣ್ಣು ಮಕ್ಕಳು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಅಧ್ಯಯನ ನೆರವಾಗುತ್ತದೆಂದರು.


ಪುಸ್ತಕಗಳಲ್ಲಿನ ಒಳ್ಳೆಯ ಅಂಶಗಳನ್ನು ಅಳವಡಿಸಿಕೊಂಡು ಬದುಕು ಕಟ್ಟಿಕೊಳ್ಳಬೇಕು. ಕವಿಗಳ, ಚಿಂತಕರ ಹಾಗು ಸಾಹಿತಿಗಳ ಪುಸ್ತಕಗಳನ್ನು ಓದಿ ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು. ಹೆಣ್ಣು ಮಕ್ಕಳ ಮೇಲೆ ಆಗುವ ದೌರ್ಜನ್ಯಗಳನ್ನು ಖಂಡಿಸಬೇಕು. ಹೆಣ್ಣು ಮಕ್ಕಳನ್ನು ಕೀಳಾಗಿ ನೋಡುವವರಿಗೆ ಶಿಕ್ಷೆ ಕೊಡಿಸುವ ಪಣ ತೊಡಬೇಕೆಂದರು.




ಜಿಲ್ಲಾ ಬರಹಗಾರರ ಸಂಘದ ಅಧ್ಯಕ್ಷ ಸುಂದೇಶ್ ಡಿ.ಉಡುವಾರೆ ಅವರು ಮಾತನಾಡಿ, ಪುಸ್ತಕ ಓದುವು ದರಿಂದ ಅಂತರಂಗದ ಜ್ಞಾನ ಹೆಚ್ಚುತ್ತದೆ. ಹಲವಾರು ಸಾಹಿತಿಗಳ ಪುಸ್ತಕಗಳನ್ನು ಓದಿ ಆದರ್ಶ ಬೆಳೆಸಿಕೊಳ್ಳಬೇಕೆಂದರು.

ಪ್ರಾಂಶುಪಾಲರಾದ ಡಾ.ಕೆ.ಜಿ.ಕವಿತ ಅಧ್ಯಕ್ಷತೆ ವಹಿಸಿದ್ದರು. ಪ್ರಾಧಿಕಾರದ ಸದಸ್ಯ ಕುಶಾಲ್ ಬರಗೂರು, ಕನ್ನಡ ವಿಭಾಗದ ಮುಖ್ಯಸ್ಥ ಬಿ.ಹೆಚ್.ರಾಮೇಗೌಡ, ಪ್ರಾಧ್ಯಾಪಕ ರಾದ ಡಾ. ಹೆಚ್.ಕೆ.ವೆಂಕಟೇಶ್, ಶಿಲ್ಪಶ್ರೀ, ಎಸ್.ಯೋಗೇಶ್ ಇತರರಿದ್ದರು.

### ನಿಧನ



ಹಾಸನ: ನಗರದ ಆರ್.ಸಿ.ರಸ್ತೆಯಲ್ಲಿರುವ ಅವನಿ ಆರ್ಗಾನಿಕ್ಸ್ ಮಾಲೀಕ ಜಯಪ್ರಸಾದ್ ಬಳ್ಳೇಕೆರೆ ಅವರ ತಾಯಿ ದಾಕ್ಷಾಯಣಮ್ಮ (62) ಅವರು ಬುಧವಾರ ನಿಧನರಾದರು.

ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಮೃತರಿಗೆ ಇಬ್ಬರು ಪುತ್ರರು, ಪುತ್ರಿ ಇದ್ದಾರೆ. ಹುಟ್ಟೂರಾದ ತಿಪಟೂರು ತಾಲ್ಲೂಕು ಬಳ್ಳೇಕೆರೆಯಲ್ಲಿ ಗುರುವಾರ ಅಂತ್ಯಕ್ರಿಯೆ ನೆರವೇರಿತು.

### ರೋಹಿತ್ ಶರ್ಮಾ, ಶ್ರೇಯಸ್ ಅಯ್ಯರ್ ಅರ್ಧ ಶತಕ | ಆ್ಯಡಂ ಜಂಪಾ 4 ವಿಕೆಟ್

# 2ನೇ ಪಂದ್ಯದಲ್ಲೂ ಸೋತು ಸರಣಿ ಕೈಚೆಲ್ಲಿದ ಭಾರತ

• ಪ್ರಜೋದಯ ವರದಿ

**ಅಡಿಲೇಡ್:** ಆಸ್ಟ್ರೇಲಿಯಾ ವಿರುದ್ಧ ಏಕದಿನ ಸರಣಿಯ 2ನೇ ಪಂದ್ಯದಲ್ಲೂ ಭಾರತ ತಂಡ 2 ವಿಕೆಟ್‌ಗಳ ಸೋಲನುಭವಿಸಿದೆ. ಆ ಮೂಲಕ ಸರಣಿಯನ್ನು ಕೈಚೆಲ್ಲಿದೆ.

ಭಾರತ ನೀಡಿದ 264 ರನ್‌ಗಳನ್ನು ಬೆನ್ನತ್ತಿದ್ದ ಆಸ್ಟ್ರೇಲಿಯಾ 46.2 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು ಗುರಿ ತಲುಪಿತು. ಮ್ಯಾಥ್ಯೂ ಶಾರ್ಟ್ (74) ಹಾಗೂ ಕೂಪೆದ ಕೊನೊಲ್ಲಿ (61) ಅವರು ಅರ್ಧಶತಕ ಬಾರಿಸಿದರು. ಟ್ರಾವಿಸ್ ಹೆಡ್ (28), ಮ್ಯಾಥ್ಯೂ ರೆನ್ಶೋ (30), ಮಿಚೆಲ್ ಓವೆನ್ (36) ಗೆಲುವಿನಲ್ಲಿ ಉಪಯುಕ್ತ ಕಾಣಿಕೆ ನೀಡಿದರು.

ಭಾರತದ ಪರ ಅರ್ಷದೀಪ್ ಸಿಂಗ್, ಹರ್ಷಿತ್ ರಾಣಾ ಹಾಗೂ ವಾಷಿಂಗ್ಟನ್ ಸುಂದರ್ ತಲಾ 2 ವಿಕೆಟ್ ಕಿತ್ತರು. ಉಳಿದೆರಡು ವಿಕೆಟ್ ಸಿರಾಜ್ ಹಾಗೂ ಅಕ್ಷರ್ ಪಟೇಲ್ ಪಾಲಾಯಿತು.

ಅಡಿಲೇಡ್‌ನಲ್ಲೂ ವಿಫಲ

ವಿದಾಯದ ಸುಳಿವು ನೀಡಿದರೇ ವಿರಾಟ್ ಕೊಹ್ಲಿ, ಟಾಸ್ ಗೆದ್ದ ಆತಿಥೇಯ ತಂಡದ ನಾಯಕ ಮಿಚೆಲ್ ಮಾರ್ಷ್, ಬೌಲಿಂಗ್ ಆಯ್ದುಕೊಂಡರು. ಕ್ರೀಸ್‌ಗಿಳಿದ ಟೀಂ ಇಂಡಿಯಾಗೆ




ನಿರೀಕ್ಷಿತ ಆರಂಭ ಸಿಗಲಿಲ್ಲ. ನಾಯಕ ಶುಭಮನ್ ಗಿಲ್ (9) ಹಾಗೂ ವಿರಾಟ್ ಕೊಹ್ಲಿ (0) ಒಂದೇ ಓವರ್‌ನಲ್ಲಿ ಔಟಾಗುವುದೊಂದಿಗೆ ಆರಂಭಿಕ ಆಘಾತ ಎದುರಾಯಿತು.

ಒತ್ತಡದ ಈ ಹೊತ್ತಿನಲ್ಲಿ ಜೊತೆಯಾದ ರೋಹಿತ್ ಮತ್ತು ಶ್ರೇಯಸ್ ಭಾರತದ ಇನಿಂಗ್ಸ್‌ಗೆ ಬಲತುಂಬಿದರು. ಆರಂಭದಲ್ಲಿ ತಿಣುಕಾಡುತ್ತಿದ್ದ ರೋಹಿತ್ ನಿಧಾನವಾಗಿ ಆಟಕ್ಕೆ ಕುದುರಿಕೊಂಡರು. ಈ ಜೋಡಿ 3ನೇ ವಿಕೆಟ್ ಪಾಲುದಾರಿಕೆಯಲ್ಲಿ 118 ರನ್ ಕಲೆಹಾಕುವುದರೊಂದಿಗೆ ವಿಕೆಟ್ ಕುಸಿತಕ್ಕೆ ತಡೆಯೊಡ್ಡಿತು.

97 ಎಸೆತಗಳನ್ನು ಎದುರಿಸಿದ ರೋಹಿತ್, 7 ಬೌಂಡರಿ ಮತ್ತು 2 ಸಿಕ್ಸರ್ ಸಹಿತ 73 ರನ್ ಗಳಿಸಿ ಔಟಾದರೆ, ಅಯ್ಯರ್ ಆಟ 61 ರನ್‌ಗೆ ಕೊನೆಯಾಯಿತು. ಮಧ್ಯಮ ಕ್ರಮಾಂಕದಲ್ಲಿ ಭರವಸೆ ಮೂಡಿಸಿದ ಅಕ್ಷರ್ ಪಟೇಲ್ 44 ರನ್‌ಗಳ ಕೊಡುಗೆ ನೀಡಿದರು. ಕೊನೆಯಲ್ಲಿ ಹರ್ಷಿತ್ ರಾಣ (24) ಅವರೂ ಉಪಯುಕ್ತ ಆಟವಾಡಿದರು. ಹೀಗಾಗಿ, ನಿಗದಿತ ಓವರ್‌ಗಳಲ್ಲಿ 9 ವಿಕೆಟ್‌ಗೆ 264 ರನ್ ಕಲೆಹಾಕಲು ಸಾಧ್ಯವಾಯಿತು.

ಆಸಿಸ್ ಪರ ಸ್ಪಿನ್ನರ್ ಆ್ಯಡಂ ಜಂಪಾ ನಾಲ್ಕು ವಿಕೆಟ್ ಪಡೆದರೆ, ಷೇವಿಯರ್ ಬರ್ಟ್ಲೆಟ್ ಹಾಗು ಮಿಚೆಲ್ ಸ್ಟಾರ್ಕ್ 2 ವಿಕೆಟ್ ಕಿತ್ತರು.




ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK